MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 229 | ಗುರುವಾರ : 26–06–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 229 | THURSDAY : 26–06–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಪ್ಲಾಸ್ಟಿಕ್ ಮುಕ್ತ ರಾಯಚೂರು ಜಿಲ್ಲೆಯಾಗಲು ಸಹಕರಿಸಿ: ನ್ಯಾ.ಹೆಚ್.ಎ.ಸ್ವಾತಿಕ್

ಯುವ ಮಾರ್ಗ ಸುದ್ದಿ

**ರಾಯಚೂರು,ಜೂ.25–** ಸಾರ್ವಜನಿಕರು ಪ್ಲಾಸ್ಟಿಕ್ ವಸ್ತುಗಳ ಬಳಕೆ ಕಡಿಮೆ ಮಾಡಬೇಕು. ನಿಷೇಧಿತ ಪ್ಲಾಸ್ಟಿಕ್ ಬಳಸಬಾರದು ಎಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್ ಎ ಸಾತ್ವಿಕ್ ಅವರು ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಅರಣ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಭಾರತ್




ಸ್ಕೌಟ್ಸ್ ಮತ್ತು ಗೈಡ್ಸ್ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜೂನ್ 25ರಂದು ನಡೆದ ಪರಿಸರ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ಮಾಡಲು ನಗರಸಭೆ ಸೇರಿದಂತೆ ಇನ್ನಿತರ ಇಲಾಖೆಗಳು ಕ್ರಮ ವಹಿಸಿ ಅಂಗಡಿ, ಮುಂಗಟ್ಟುಗಳ ಮೇಲೆ ದಾಳಿ ನಡೆಸಿ ಪ್ಲಾಸ್ಟಿಕ್ ಮಾರಾಟಗಾರರ ಮೇಲೆ ದಂಡ ವಿಧಿಸಿದರು ಸಹ ಕೆಲವೆಡೆ ಪ್ಲಾಸ್ಟಿಕ್ ಬಳಕೆ ಕಾಣುತ್ತದೆ. ಇದು ಸರಿಯಲ್ಲ. ಸಾರ್ವಜನಿಕರು ಸಹಕರಿಸಬೇಕು ಎಂದರು. ಪರಿಸರ ಸರಿಯಾಗಿದ್ದಾಗ ಮಾತ್ರ ಉತ್ತಮ ಆರೋಗ್ಯ ಹೊಂದಲು ಸಾಧ್ಯವಾಗುತ್ತದೆ. *2ನೇ ಪುಟಕ್ಕೆ*

## ಜನರೊಂದಿಗೆ ಜನತಾದಳ ಪಕ್ಷ ಸದಸ್ಯತ್ವ ಅಭಿಯಾನ
## ಇಂದು ನಿಖಿಲ್ ಕುಮಾರಸ್ವಾಮಿ ಮಾನ್ವಿಗೆ ಆಗಮನ: ಈರಣ್ಣ ಮರ್ಲಟ್ಟಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.25–**ಜನರೊಂದಿಗೆ ಜನತಾದಳ ಪಕ್ಷದ ಸದಸ್ಯತ್ವ ಅಭಿಯಾನದ ಹಿನ್ನೆಲೆಯಲ್ಲಿ ಇಂದು ಮಧ್ಯಾಹ್ನ ಮಾನ್ವಿಗೆ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆಗಮಿಸಲಿದ್ದಾರೆ ಎಂದು ಜೆಡಿಎಸ್ ತಾಲೂಕ ಅಧ್ಯಕ್ಷ ಡಾ.ಈರಣ್ಣ ಮರ್ಲಟ್ಟಿ ಹೇಳಿದರು.




ಬುಧುವಾರ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಾದ್ಯಂತ ಜೆಡಿಎಸ್ ಪಕ್ಷ ಸಂಘಟನೆ ಮತ್ತು ಬಲವರ್ಧನೆಗಾಗಿ ಜನರೊಂದಿಗೆ ಜನತಾದಳ ಪಕ್ಷದ ಸದಸ್ಯತ್ವ ಅಭಿಯಾನದ ಹಿನ್ನೆಲೆಯಲ್ಲಿ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಪಟ್ಟಣಕ್ಕೆ ಆಗಮಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಮಾನ್ವಿ ತಾಲೂಕ ಜೆಡಿಎಸ್ ಘಟಕದಿಂದ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರನ್ನು ಕರಡಿಗುಡ್ಡ ರಸ್ತೆಯಲ್ಲಿ ಸ್ವಾಗತ ಮಾಡಿಕೊಂಡು ನಂತರ ಪಟ್ಟಣದ ಅಂಬೇಡ್ಕರ್ ವೃತ್ತದ ಮೂಲಕ ಕೋನಾಪುರ ಪೇಟೆ, ಟಿಪ್ಪು ಸುಲ್ತಾನ ಚೌಕ್, ತಾಯಿ ಮಕ್ಕಳ ಆಸ್ಪತ್ರೆ ಮೂಲಕ ಪುರಸಭೆ ಮಾರ್ಗವಾಗಿ ಬಸವ ವೃತ್ತದಿಂದ ವಾಲ್ಮೀಕಿ ವೃತ್ತ ಸೇರಿದಂತೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಿಖಿಲ್ ಕುಮಾರಸ್ವಾಮಿ ಅವರು ಪಕ್ಷದ ಕಾರ್ಯಕರ್ತರೊಂದಿಗೆ ಬೃಹತ್ ಬೈಕ್ ರ್ಯಾಲಿ ನಡೆಸಲಿದ್ದಾರೆ. ನಂತರ ಪಟ್ಟಣದ ಎಪಿಎಂಸಿ ಕಲ್ಯಾಣ ಮಂಟಪದಲ್ಲಿ ಜನರೊಂದಿಗೆ ಜನತಾದಳ ಪಕ್ಷದ ಸದಸ್ಯತ್ವ ಅಭಿಯಾನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.ಮಾಜಿ ಶಾಸಕ ರಾಜಾವೆಂಕಟಪ್ಪ ನಾಯಕ, ಸಿಂಧನೂರಿನ ಮಾಜಿ ಶಾಸಕ ವೆಂಕಟ ರಾವ್ ನಾಡಗೌಡ, ಸೇರಿದಂತೆ ರಾಜ್ಯದ ಮುಖಂಡರು ಆಗಮಿಸಲಿದ್ದಾರೆ ಪಕ್ಷದ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷದ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಯುವ ಘಟಕದ ರಾಜ್ಯ ಉಪಾಧ್ಯಕ್ಷ ರಾ ಜಾ ರಾಮಚಂದ್ರ ನಾಯಕ, ಸಿರವಾರ ತಾಲೂಕ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀ ಲ್, ಯುವ ಘಟಕದ ಅಧ್ಯಕ್ಷ ಪಿ.ರವಿಕು ಮಾರ ವಕೀಲ ಮುಖಂಡರಾದ ಖಲೀಲ್ ಖುರೇಶಿ, ಎಚ್.ಮೌನೇಶ, ಬಸನಗೌಡ ಬೆಟ್ಟದೂರು, ವಿಜಯ ಕುಮಾರ, ಸುಭಾನ್ ಬೇಗ್, ಶೌಕತ್ ಅಲಿ, ನಾರಾ ಯಣರಾವ್, ಶಿವರಾಮರೆಡ್ಡಿ, ದೇವರಾಜ ನಾಯಕ ಸೇರಿದಂತೆ ಅನೇಕರಿದ್ದರು.

## ಗ್ರಾಮಗಳನ್ನು ಅರಕೇರಾ ತಾಲೂಕಿನಲ್ಲಿಯೇ ಉಳಿಸುವಂತೆ ಉಪಾಧ್ಯಕ್ಷೆ ಮನವಿ



ಯುವ ಮಾರ್ಗ ಸುದ್ದಿ

**ದೇವದುರ್ಗ,ಜೂ.25–** ತಾಲೂಕಿನ ಪಲಕನಮರಡಿ ಗ್ರಾಮ ಪಂಚಾಯಿತಿ ವ್ಯಾಪ್ತಿ ಯಲ್ಲಿ ಬರುವ ಕೆಲ ಗ್ರಾಮಗಳು ನೂತನ ಅರಕೇರ ತಾಲೂಕಿನಲ್ಲಿಯೇ ಮುಂದುವ ರೆಸಬೇಕೆಂದು ಪಲಕನಮರಡಿ ಪಂಚಾಯಿತಿ ಉಪಾಧ್ಯಕ್ಷೆ ಚೆನ್ನಮ್ಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಅಭಿ ಪ್ರಾಯ ವರದಿಯನ್ನು ನೀಡಿ ಮನವಿ ಮಾಡಿಕೊಂಡರು.

ಪಲಕನ ಮರಡಿಯಿಂದ ಗಲಗ್ ಹೋಬಳಿಗೆ ಕೇವಲ 8 ಕೀ.ಮೀ. ಮತ್ತು ಅರಕೇರ ತಾಲೂಕಿಗೆ 20 ಕೀ.ಮೀ. ದೂರವಿದೆ. ಆದರ ಜಾಲಹಳ್ಳಿಗೆ 22 ಕೀ.ಮೀ. ಮತ್ತು ದೇವದುರ್ಗ ತಾಲೂಕಿಗೆ 48 ಕೀ.ಮೀ. ಜನ ಸಾಮಾನ್ಯರಿಗೆ ದೂರವಾಗುತ್ತದೆ. ನೂತನ ತಾಲೂಕು ಅರಕೇರಕ್ಕೆ ಸೇರ್ಪಡೆಯಾದರೆ ಆಡಳಿತಾತ್ಮಕವಾಗಿ ಶಿಕ್ಷಣ, ಆರೋಗ್ಯ ಸೇವೆ, ಸಾರಿಗೆ ಸೇವೆ ಸೇರಿದಂತೆ ಹಲವು ಅನೂಕುಲಗಳು ಈ ಭಾಗದ ಗ್ರಾಮಸ್ಥರಿಗೆ ಸುಲಭವಾಗಿ ದೊರಕುತ್ತವೆ.

ಅಲ್ಲದೇ, ಈತ್ತಿಚೇಗೆ ದಿನಾಂಕ: 21–6–2025 ರಂದು ನಡೆದ ಗ್ರಾಮ ಸಭೆಯಲ್ಲಿ ನನ್ನ ಖಚಿತ ಅಭಿಪ್ರಾಯವನ್ನು ಅಧಿಕಾರಿಗಳು ಪಡೆದಿರುವಿದಿಲ್ಲ. ಹೀಗಾಗಿ ಮನವಿ ಅಅರ್ಜಿಯ ಮೂಲಕ ನನ್ನ ನಿಜವಾದ ಅಭಿಪ್ರಾಯವನ್ನು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ನೀಡಿರುತ್ತೇನೆ ಅದನ್ನೇ ಪರಿಗಣಿಸಿ ಮಾನ್ಯಗೊಳಿಸಬೇಕೆಂದು ವಿನಂತಿಸಿಕೊಂಡರು.

## ರಸ್ತೆ ಸರಿಪಡಿಸಿ, ಅಪಘಾತಗಳು ತಡೆಗಟ್ಟಲು ಕರವೇ ಆಗ್ರಹ




ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜೂ.25–** ತಾಲೂಕಿನಾದ್ಯಂತ ರಸ್ತೆಗಳ ಸಂಪೂರ್ಣ ಹಾಳಾಗಿದ್ದು, ವಾಹನ ಸವಾರರು ಪರದಾಡುತ್ತಿದ್ದಾರೆ ಕೂಡಲೇ ರಸ್ತೆ ಸರಿಪಡಿಸಿ ಅಪಘಾತ ತಡೆಗೆ ಸಹಾಯಕ ಆಯುಕ್ತರಿಗೆ ಕರವೇ ಕಾರ್ಯಕರ್ತರು ಮನವಿ ಸಲ್ಲಿಸಿ ಒತ್ತಾಯಿಸಿದರು

ಅವಘಡಗಳು ಸಂಭವಿಸಿದರೆ ಅಂಬುಲೇನ್ಸ್, ಅಗ್ನಿ ಶಾಮಕದ ವಾಹನಗಳು ಸಮಯಕ್ಕೆ ಸರಿಯಾಗಿ ತಲುಪದೇ ಭಾರಿ ಅನಾಹುತಗಳು ಸಂಭವಿಸಿದ ಉದಾರಹಣೆಗಳಿವೆ. ತಾಲೂಕಿನ ಅಮರೇಶ್ವರ ಕ್ರಾಸ್ ದಿಂದ ಕೋಠಾ ರಸ್ತೆ, ಗುಡದನಾಳ ದಿಂದ ಹಟ್ಟಿ, ಗುರುಗುಂಟಾ ದಿಂದ ಗೌಡೂರು ರಸ್ತೆ, ನಾಗರಹಾಳ ದಿಂದ ಹಲ್ಕಾವಟಗಿ ಹನುಮಗುಡ್ಡ ಹೊಸೂರುದಿಂದ ಆನೆಹೊಸೂರು, ಗುಂಡಸಾಗರ ದಿಂದ ಆನೆಹೊಸೂರು ರಸ್ತೆ, ಚಿತ್ರನಾಳ ದಿಂದ ಮಾವಿನಭಾವಿ ರಸ್ತೆಯಲ್ಲದೇ ತಾಲೂಕು ಸಂಪರ್ಕಿಸುವ ಹಲವು ರಸ್ತೆಗಳು ಸಂಪೂರ್ಣವಾಗಿ ಹದಗೆಟ್ಟು ಹೋಗಿವೆ. ದ್ವಿಚಕ್ರ ವಾಹನ ಸವಾರರು ತಮ್ಮ ಪ್ರಾಣವನ್ನು ಕೈಯಲ್ಲಿಟ್ಟುಕೊಂಡು ಪ್ರಯಾಣಿಸುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮಳೆ ಬಂದರಂತೂ ಈ ರಸ್ತೆಗಳಲ್ಲಿ ಸಂಚರಿಸಲು ಸಾಧ್ಯವಾಗುವುದಿಲ್ಲ.

ಸ್ವಲ್ಪ ಮಳೆ ಬಂದರೆ ಈ ರಸ್ತೆಗಳು ಕೆಸರು ಗದ್ದೆಗಳಾಗಿ ಮಾರ್ಪಟ್ಟಾಗುತ್ತವೆ. ಇಂತಹ ರಸ್ತೆಗಳಲ್ಲಿ ಸಂಚಾರ ಮಾಡುವುದಾದರೂ ಹೇಗೆ. ಗ್ರಾಮೀಣ ಭಾಗದ ರಸ್ತೆಗಳು ಪರಿಸ್ಥಿತಿ ಹೀಗಾದರೆ *2ನೇಪುಟಕ್ಕೆ*

## ಜುಮ್ಮಲದೊಡ್ಡಿ ಏರಿಯಾದಲ್ಲಿ ಹೊಸ ಟ್ರಾನ್ಸ್‌ಫಾರ್ಮರ್ ಅಳವಡಿಸಲು ಆಗ್ರಹ

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.25–**ತಾಲೂಕಿನ ಪುರಸಭೆ ವ್ಯಾಪ್ತಿಯ ವಾರ್ಡ್ ನಂಬರ್ 11 ಮತ್ತು 12 ರ ಜುಮ್ಮಲದೊಡ್ಡಿ ಏರಿಯಾದಲ್ಲಿ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಸುಟ್ಟು ಹೋಗಿದ್ದು, ಸ್ಥಳೀಯ ನಿವಾಸಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಕೂಡಲೇ ಹೊಸ ಟ್ರಾನ್ಸ್‌ಫಾರ್ಮರ್ ಹಾಗೂ 11ಕೆವಿಎ ಕೇಬಲ್ ಇನ್ಸೂಲೇಷನ್ ವೈರ್ ಹಾಕುವಂತೆ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ.

ಹಳೆಯ ಟ್ರಾನ್ಸ್‌ಫಾರ್ಮರ್ ನಿಂದಾಗಿ ಪದೇ ಪದೇ ವಿದ್ಯುತ್ ವ್ಯತ್ಯಯ ಉಂಟಾಗಿ



ಮನೆಗಳ ಗೃಹೋಪಯೋಗಿ ಉಪಕರಣಗಳು ಹಾಳಾಗುತ್ತಿವೆ ಎಂದು ಆರೋಪಿಸಿರುವ ನಿವಾಸಿಗಳು, ವಿದ್ಯುತ್ ಇಲಾಖೆಯ ನಿರ್ಲಕ್ಷ್ಯಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜುಮ್ಮಲದೊಡ್ಡಿ ಏರಿಯಾದಲ್ಲಿ ಅಳವಡಿಸಲಾಗಿದ್ದ ಹಳೆಯ ಟ್ರಾನ್ಸ್‌ಫಾರ್ಮರ್‌ನಿಂದಾಗಿ ವಿದ್ಯುತ್ ಪೂರೈಕೆ ಸರಿಯಾಗಿ ಆಗುತ್ತಿಲ್ಲ. ಇದರಿಂದಾಗಿ ಅನೇಕ ಮನೆಗಳಲ್ಲಿ ಟಿವಿ, ಫ್ರಿಡ್ಜ್‌ನಂತಹ ಗೃಹೋಪಯೋಗಿ ಯಂತ್ರೋಪಕರಣಗಳು ಸುಟ್ಟು ಹೋಗಿವೆ. ಈ ಕುರಿತು ವಿದ್ಯುತ್ ಇಲಾಖೆಗೆ ಹಲವು ಬಾರಿ ಮೌಖಿಕವಾಗಿ ಹಾಗೂ ದೂರವಾಣಿ ಮೂಲಕ ದೂರು ನೀಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ನಿವಾಸಿಗಳು ದೂರಿದ್ದಾರೆ.ಹಳೆಯ ಟ್ರಾನ್ಸ್‌ಫಾರ್ಮರ್ ಬದಲಾಯಿಸಿ ಹೊಸದನ್ನು ಅಳವಡಿಸುವ ಬದಲು, ಮತ್ತೆ ಹಳೆಯ ಟ್ರಾನ್ಸ್‌ಫಾರ್ಮರ್ ಅನ್ನೇ ಹಾಕಿದ್ದರು. ಈಗ ಅದು ಕೂಡ ಸಂಪೂರ್ಣವಾಗಿ ಸುಟ್ಟು ಹೋಗಿದೆ ಎಂದು ಸ್ಥಳೀಯರು *2ನೇ ಪುಟಕ್ಕೆ*

## ಸಿರವಾರ: ಶಾಲಾ ಕಟ್ಟಡಗಳ ಕಳಪೆ ಮಟ್ಟದಲ್ಲಿ ನಿರ್ಮಾಣ – ಪ.ಪಂ.ಸದಸ್ಯ ಆರೋಪ

ಯುವ ಮಾರ್ಗ ಸುದ್ದಿ

**ಸಿರವಾರ,ಜೂ.25–** ಸ್ಥಳೀಯ ಸರಕಾರಿ ಬಾಲಕರ ಪ್ರೌಢ ಶಾಲೆಯಲ್ಲಿ ಕರ್ನಾಟಕ ಗ್ರಾಮೀಣ ಸೌಕರ್ಯ ಅಭಿವೃದ್ಧಿ ನಿಗಮದಿಂದ 4 ತರಗತಿಯ ಕಟ್ಟಡಗಳ ನಿರ್ಮಾಣ ಕಾಮಗಾರಿ ಕಳಪೆ ಗುಣಮಟ್ಟದ ಸಾಗಿದೆ ಎಂದು ವಾರ್ಡನ್ 14ರ ಸದಸ್ಯ ಅಜೀತ್ ಕುಮಾರ್ ಹೊನ್ನಟಗಿ ಆರೋಪಿಸಿದರು.



ಅವರು ಮಂಗಳವಾರ ಕಾಮಗಾರಿ ಸ್ಥಳಕ್ಕೆ ಭೇಟಿನೀಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿ ಕೆಕೆಆರ್ ಡಿಬಿ ಯೋಜನೆಯಡಿಯಲ್ಲಿ 72ಲಕ್ಷ ರೂಪಾಯಿ ವೆಚ್ಚದಲ್ಲಿ 4 ಕಟ್ಟಡಗಳು, ತಳಪಾಯ ಕಲ್ಲಿನಿಂದ ಮಾಡಬೇಕು, ಅಲ್ಲಿ ನೆಲ ಹಾಳು ಮಣ್ಣಿನಿಂದ ಕೂಡಿದೆ, ನೆಲ ಸಮಾನವಾಗಿದೆ, ಕನಿಷ್ಠ ಪಕ್ಷ ಮೂರು ಅಡಿ ಎತ್ತರದಲ್ಲಿ ತಳಪಾಯ ಇರಬೇಕು, ಕಡಿಮೆ ಗೇಜ್ ಕಬ್ಬಿಣದ ರಾಡ್ ಹಾಕಲಾಗಿದೆ, ಕಾಮಗಾರಿ ಗುತ್ತಿಗೆಪಡೆದ ಕೆಆರ್ ಐಡಿಎಲ್ ಅಧಿಕಾರಿಗಳು ಸ್ಥಳಕ್ಕೆ ಬಂದಿಲ್ಲಾ, ಕಾರ್ಮಿಕರು ಮಾಡಿದೆ ಕೆಲಸ, ಅಧಿಕಾರಿಗಳು ಆಡಿದೆ ಆಟ ಎನ್ನುವಂತೆ ತೋರುತ್ತಿದೆ, ಅನುಮೋದನೆ ಪ್ರಕಾರ ಕಾಮಗಾರಿ ಮಾಡದೆ, ಇಲಾಖೆಯ ಅಧಿಕಾರಿಗಳು ಸರಕಾರದ ಹಣವನ್ನು ದುರ್ಬಳಕೆ ಮಾಡಲು ಹೊರಟಿದ್ದಾರೆ, ಬೇಕಾ ಬಿಟ್ಟಿ ಕಾಮಗಾರಿ ಮಾಡಿದರೆ, ಮುಂದೆ ಹೆಚ್ಚು ಕಾಲ ಬಾಳಿಕೆಗೆ ಬರುವುದಿಲ್ಲ, ಮಕ್ಕಳಿಗೆ ತೊಂದರೆ ಯಾಗುತ್ತದೆ, ಶಿಕ್ಷಣ ಇಲಾಖೆಯ ಹಾಗೂ ಪಟ್ಟಣ ಪಂಚಾಯತಿ ಅಧಿಕಾರಿಗಳು ಕಾಮಗಾರಿ ಬಗ್ಗೆ ಮಾಹಿತಿ ಇಲ್ಲಾ ಎನ್ನುತ್ತಾರೆ ಸರಕಾರದ ಹಣ ಪೋಲು ಮಾಡಲಾಗುತ್ತಿದೆ, ಇದಕ್ಕೆ ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳು ಗಮನ ಹರಿಸಿ ಉತ್ತಮ ಗುಣಮಟ್ಟದ ಕಾಮಗಾರಿ ಮಾಡಬೇಕು, ಕಳಪೆ ಕಾಮಗಾರಿ ಮಾಡಲು ಮುಂದಾದ ಅಧಿಕಾರಿಗಳ ಮೇಲೆ ಸೂಕ್ತ ಕ್ರಮಕ್ಕೆ ಒತ್ತಾಯಿಸಿದರು. ವಿದ್ಯಾರ್ಥಿ ಸಂಘಟನೆಯ ಡೇವಿಡ್ ಸ್ಥಳದಲ್ಲಿ ಇದ್ದರು.

## ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಹಾಗೂ ಕಳ್ಳಸಾಗಣೆ ವಿರೋಧಿ ದಿನಾಚರಣೆ
## ಮಾದಕ ವ್ಯಸನದಿಂದ ಸಮಾಜದ ಸ್ವಾಸ್ಥ್ಯ ಹಾಳು : ಡಾಕ್ಟರ ಮನೋಹರ ಪತ್ತಾರ




ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.25–** ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಮಾನಸಿಕ ಆರೋಗ್ಯ ವಿಭಾಗ ರಾಯಚೂರು ತಾಲೂಕ ಆರೋಗ್ಯ ಇಲಾಖೆ ಮಾನವಿ ಇವರ ಸಂಯುಕ್ತ ಆಶ್ರಯದಲ್ಲಿ ತಾಲೂಕ ಆರೋಗ್ಯ ಇಲಾಖೆ ಸಭಾಂಗಣದಲ್ಲಿ ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಹಾಗೂ ಕಳ್ಳಸಾಗಣೆ ವಿರೋಧಿ ದಿನಾಚರಣೆ ನೆಡೆಯಿತು.

ಅಂತರರಾಷ್ಟ್ರೀಯ ಮಾದಕ ವಸ್ತುಗಳ ವಿರೋಧಿ ದಿನಾಚರಣೆಯನ್ನು ಸಸಿ ನೀರು ಹಾಕುವ ಮೂಲಕ ಮನೋರೋಗ ತಜ್ಞರಾದ ಡಾಕ್ಟರ ಮನೋಹರ ಪತ್ತಾರ ಅವರು ಉದ್ಘಾಟನೆ ಮಾಡಿದರು.ನಂತರ ಮಾತನಾಡಿದ ಅವರು,ಅಮಲು ಬರಿಸುವ ಮಾದಕ ವಸ್ತುಗಳ ಸೇವನೆಯಿಂದ ಮನುಷ್ಯ ಅನೇಕ ದೈಹಿಕ ಮತ್ತು ಮಾನಸಿಕ ಖಾಯಿಲೆಗಳಿಗೆ ಒಳಗಾಗಿ ತನ್ನ ಜೀವನವನ್ನೇ ಕೆಳೆದುಕೊಳ್ಳುತ್ತಾನೆ.ಹಾಗೂ ಆರ್ಥಿಕವಾಗಿ ದಿವಾಳಿ ಆಗುತ್ತಾನೆ. ಇದರಿಂದ ಕುಟುಂಬ ಮತ್ತು ಸಮಾಜದ ಮೇಲೆ ದುಷ್ಪರಿಣಾಮ ಬೀರುತ್ತದೆ. ಆದುದರಿಂದ ಯುವಕರು ಮತ್ತು ಸಮಾಜ ಮಾದಕ ವಸ್ತುಗಳಿಂದ ದೂರ ಇರಬೇಕು ಈ ದುಶ್ಚಟಗಳಿಗೆ ಮಕ್ಕಳು ಮತ್ತು ಯುವಕರು ಹೆಚ್ಚು ಬಲಿಯಾಗುತ್ತಿದ್ದಾರೆ.ಮಾದಕ ವಸ್ತುಗಳ ಮಾರಾಟ ಹಾಗೂ ಕಳ್ಳಸಾಗಣೆ ಕಾನೂನು ಬಾಹಿರವಾಗಿದೆ. ಇದನ್ನು ಬುಡ ಸಮೇತ ಕಿತ್ತೊಗೆಯಲು ಪ್ರತಿಯೊಬ್ಬರು ನಾಗರಿಕರು ಜವಾಬ್ದಾರಿ ತೆಗೆದುಕೊಳ್ಳಬೇಕು ಎಂದರು.

ನಂತರ ಮಾತನಾಡಿದ ವೈದ್ಯಾಧಿಕಾರಿಗಳಾದ ಡಾಕ್ಟರ ಸುಧಾಕರ ರೆಡ್ಡಿ ಅವರು ಯುವ ಜನರೇ *2ನೇಪುಟಕ್ಕೆ*

## ಮೊದಲನೇಯ ಪುಟದಿಂದ

# ಪ್ಲಾಸ್ಟಿಕ್ ಮುಕ್ತ ರಾಯಚೂರು ಜಿಲ್ಲೆಯಾಗಲು ಸಹಕರಿಸಿ: ನ್ಯಾ.ಹೆಚ್.ಎ.ಸ್ವಾತಿಕ್

ವಾಯು ಮಾಲಿನ್ಯದ ದುಷ್ಪರಿಣಾಮಗಳ ಬಗ್ಗೆ ಜನತೆ ಅರಿಯಬೇಕು. ಪ್ಲಾಸ್ಟಿಕ್ ಬಳಸಬಾರದು ಎಂದು ಮನವಿ ಮಾಡಿದರು.

ವಾಯು ಮಾಲಿನ್ಯ ನಿಯಂತ್ರಣಕ್ಕಾಗಿ ಹಾಗೂ ನಿಷೇಧಿತ ಪ್ಲಾಸ್ಟಿಕ್ ಬಳಸದೆ ಪರಿಸರ ಸ್ನೇಹಿ ಮಾರ್ಗೋಪಾಯಗಳ ಬಗ್ಗೆ ತಿಳಿದು, ಮತ್ತಿತರರಿಗೂ ಅರಿವು ಮೂಡಿಸಲು ಜಿಲ್ಲೆಯ ಸಮಸ್ತ ನಾಗರೀಕರು ಜಿಲ್ಲಾಡಳಿತದೊಂದಿಗೆ ಕೈ ಜೋಡಿಸಬೇಕು. ಪ್ಲಾಸ್ಟಿಕ್ ವಸ್ತು ಬಳಸಬೇಡಿ, ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ಮಾಡಲು ಸಹಕರಿಸಬೇಕು ಎಂದರು.

ವಾಯುಮಾಲಿನ್ಯವು ಹೃದಯ ರಕ್ತನಾಳದ ಕಾಯಿಲೆಗೆ ಮುಖ್ಯ ಕಾರಣವಾದ ಅಂಶವಾಗಿದೆ. ಹೃದ್ರೋಗ ಮತ್ತು ಪಾರ್ಶ್ವವಾಯು, ಶ್ವಾಸಕೋಶದ ಕ್ಯಾನ್ಸರ್ ಸಹ ಬರುತ್ತವೆ.ಕಡಿಮೆ ಉಸಿರಾಟದಿಂದಾಗಿ ಡಯಾಬಿಟಿಸ್ ಬರಲಿದೆ ಎಂಬುದರ ಅಂಶಗಳ ಬಗ್ಗೆ ಸಾರ್ವಜನಿಕರು ಅರಿತು ಎಚ್ಚೆತ್ತುಕೊಳ್ಳಬೇಕು ಎಂದರು.ಪ್ರತಿಜ್ಞಾ ವಿಧಿ ಬೋಧನೆ: ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಶಿಕ್ಷಣ ವಿಭಾಗದ ಜಿಲ್ಲಾ ಸಂಚಾಲಕರಾದ ದಂಡಪ್ಪ ಬಿರಾದರ್ ಅವರು ಇದೆ ವೇಳೆಪರಿಸರ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು.ಬಹುಮಾನ ವಿತರಣೆ: ವಿಶ್ವ ಪರಿಸರ ದಿನಾಚರಣೆ–2025ರ ಅಂಗವಾಗಿ ನಗರದ ಕನ್ನಡ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮಕ್ಕೆ ಅರಣ್ಯ ಇಲಾಖೆಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಪ್ರವೀಣ್ ಎಸ್. ಅವರು ಚಾಲನೆ ನೀಡಿದರು.

ಈ ವೇಳೆ ಅವರು ಮಾತನಾಡಿ, ಮಾನವನಿಂದ ಪರಿಸರ ನಾಶವಾಗುತ್ತಿದ್ದು, ಮಾನವ ಮತ್ತು ಪರಿಸರ ನಡುವೆ ನಿರಂತರ ಸಂಘರ್ಷ ನಡೆಯುತ್ತಿದೆ. ಆಧುನಿಕ ಯುಗದಲ್ಲಿ ಪ್ಲಾಸ್ಟಿಕ್ ಬಳಕೆ ಹೆಚ್ಚಾಗಿದ್ದು, ಅದನ್ನು ಕಡಿಮೆ ಮಾಡಬೇಕು. ಅದಕ್ಕಾಗಿ ಜಿಲ್ಲೆಯ ಎಲ್ಲಾ ಶಾಲಾ ಹಾಗೂ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲಾಗುತ್ತದೆ. ವಿದ್ಯಾರ್ಥಿಗಳು ತಮ್ಮ ತಂದೆ–ತಾಯಿಗಳಿಗೆ ಪ್ಲಾಸ್ಟಿಕ್ ಬಳಕೆ ಕುರಿತು ತಿಳಿ ಹೇಳಬೇಕೆಂದು ಹೇಳಿದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂಗಮೇಶ್, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕೆ.ಡಿ.ಬಡಿಗೇರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಬಿ.ಎಸ್.ಮುರಳೀಧರ್ ಈ ಪ್ರಕಾಶ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸ್ಥಳೀಯ ಸಂಸ್ಥೆಯ ಅಧ್ಯಕ್ಷರಾದ ಆರ್.ಹೆಚ್.ಸಾಗರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಸಿಬ್ಬಂದಿ ಇದ್ದರು.

## ರಸ್ತೆ ಸರಿಪಡಿಸಿ, ಅಪಘಾತಗಳು ತಡೆಗಟ್ಟಲು ಕರವೇ ಆಗ್ರಹ

ಪಟ್ಟಣದ ಹೃದಯ ಭಾಗದಲ್ಲಿಯೇ ಅನೇಕ ರಸ್ತೆಗಳು ಕೆಸರುಗದ್ದೆಯಾಗಿವೆ. ರಾಷ್ಟ್ರೀಯ ಹೆದ್ದಾರಿ 150ಎ ಕಾಮಗಾರಿ ಅರ್ಧಕ್ಕೆ ನಿಲ್ಲಿಸಿದ್ದು, ಇದರಿಂದಾಗಿ ಹಲವಾರು ಅಪಘಾತಗಳು ಸಂಭವಿಸಿ ಕೆಲವರು ತಮ್ಮ ಪ್ರಾಣವನ್ನೇ ಕಳೆದುಕೊಂಡಿದ್ದಾರೆ. ಗ್ರಾಮೀಣ ಭಾಗದಲ್ಲಿ ಆರೋಗ್ಯದಲ್ಲಿ ಸ್ವಲ್ಪ ಏರುಪೇರಾದರೂ ಸಮಯಕ್ಕೆ ಸರಿಯಾಗಿ ಅವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಲು ಸಾಧ್ಯವಾಗುತ್ತಿಲ್ಲ. ಇಂತಹ ರಸ್ತೆಗಳಲ್ಲಿ ಗರ್ಭಿಣಿ ಮಹಿಳೆಯರು ವಾಹನದಲ್ಲಿ ಸಂಚರಿಸಿದರೆ ರಸ್ತೆಯ ಮಧ್ಯದಲ್ಲಿಯೇ ಮಗುವಿಗೆ ಜನ್ಮ ನೀಡುವಂತಹ ರಸ್ತೆಗಳು ಗ್ರಾಮೀಣ ಭಾಗದಲ್ಲಿರುವುದರಿಂದ ಸಾರ್ವಜನಿಕರು ತಾಲೂಕು ಆಡಳಿತಕ್ಕೆ ಹಾಗೂ ಜನಪ್ರತಿನಿಧಿಗಳಿಗೆ ಹಿಡಿ ಶಾಪ ಹಾಕುವಂತಾಗಿದೆ.

ಕೂಡಲೇ ತಾಲೂಕು ಆಡಳಿತ ಮುಂದಾಗಬೇಕು ಇಲ್ಲವಾದಲ್ಲಿ ಉಗ್ರ ಹೋರಾಟವನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಅಧ್ಯಕ್ಷ ಆಂಜನೇಯ ಭಂಡಾರಿ, ಭೀಮೇಶ ನಾಯಕ, ಕುರಮೇಶ ನಾಯಕ, ಶಿವು ಪತ್ತಾರ, ಅಶೋಕ ನಾಯಕ, ಸಲಿಂಖಾನ್, ಮೌನೇಶ ಬಳ್ಳಾಪೂರ, ವಿಜಯಕುಮಾರ, ಪ್ರೇಮಕುಮಾರ, ರವಿಕುಮಾರ್, ಅಭಿಷೇಕ ನಾಯಕ, ಸಿದ್ದು ಚಲುವಾದಿ ಸೇರಿದಂತೆ ಇದ್ದರು

# ಜುಮ್ಮಲದೊಡ್ಡಿ ಏರಿಯಾದಲ್ಲಿ ಹೊಸ ಟ್ರಾನ್ಸ್‌ಫಾರ್ಮರ್ ಅಳವಡಿಸಲು ಆಗ್ರಹ

ಅಸಮಾಧಾನ ವ್ಯಕ್ತಪಡಿಸಿದ್ದಾರೆ.ಪ್ರಸ್ತುತ ಮಳೆಗಾಲ ಇರುವುದರಿಂದ ವಿದ್ಯುತ್ ಅತ್ಯಗತ್ಯವಾಗಿದೆ. ವಿದ್ಯುತ್ ಇಲ್ಲದೆ ನೀರು ಪೂರೈಕೆಯಲ್ಲೂ ವ್ಯತ್ಯಯವಾಗಿದ್ದು, ನಿವಾಸಿಗಳು ಕುಡಿಯುವ ನೀರಿಗೂ ಪರದಾಡುವಂತಾಗಿದೆ. ವಿದ್ಯುತ್ ಇಲಾಖೆಯ ಮೇಲಾಧಿಕಾರಿಗಳ ನಿರ್ಲಕ್ಷ್ಯದಿಂದಲೇ ಈ ಸಮಸ್ಯೆ ಸತತವಾಗಿ ಕಾಡುತ್ತಿದೆ ಎಂದು ಜುಮ್ಮಲದೊಡ್ಡಿ ನಿವಾಸಿಗಳು ಆರೋಪಿಸಿದ್ದಾರೆ.

ಒಂದು ವೇಳೆ ವಿದ್ಯುತ್ ಇಲಾಖೆಯು ಈ ಬೇಡಿಕೆಗಳನ್ನು ನಿರ್ಲಕ್ಷಿಸಿ, ಹೊಸ ಟ್ರಾನ್ಸ್‌ಫಾರ್ಮರ್ ಅಳವಡಿಸದೇ ಹೋದಲ್ಲಿ, ವಾರ್ಡಿನ ನಿವಾಸಿಗಳು ಮತ್ತು ವೆಲ್ಫೇರ್ ಪಾರ್ಟಿ ಮಾನವಿ ವತಿಯಿಂದ ಇಲಾಖೆಯ ಕಚೇರಿಗೆ ಮುತ್ತಿಗೆ ಹಾಕಿ ಧರಣಿ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ತಾಲೂಕ ಅಧ್ಯಕ್ಷ ಶೇಖ್ ಬಾಬಾ ಹುಸೇನ್ ,ಮಾಜಿ ಪುರಸಭೇ ಸದಸ್ಯ ಸಾದಿಕ್ ಖುರೇಷಿ, ನಾಸೀರ್ ಅಲಿ ಸೇರಿದಂತೆ ಇತರರು ಇದ್ದರು.

# ಮಾದಕ ವ್ಯಸನದಿಂದ ಸಮಾಜದ ಸ್ವಾಸ್ಥ್ಯ ಹಾಳು : ಡಾಕ್ಟರ ಮನೋಹರ ಪತ್ತಾರ

ಎಚ್ಚರ ಮಾದಕ ವಸ್ತುಗಳ ಸೇವನೆ ಸಾವಿಗೆ ನಾನೇ ಆಹ್ವಾನ ಕೊಟ್ಟಂತೆ.ಉತ್ತಮ ಸಮಾಜಕ್ಕೆ ಯವಶಕ್ತಿ ಆಧಾರಸ್ತಂಭ ವಾಗಿದೆ ವಿದ್ಯಾರ್ಥಿಗಳು ಮತ್ತು ಯುವಕರು ಮಾದಕ ವಸ್ತುಗಳ ಸೇವನೆ ಹಾಗೂ ಕಳ್ಳಸಾಗಣೆಯಂತ ಕೆಲಸದಲ್ಲಿ ತೊಡಗಿಕೊಳ್ಳಿ ಬಾರದು ಮಾದಕ ವಸ್ತುಗಳ ಸೇವನೆ ಮುಕ್ತ ಸಮಾಜ ನಿರ್ಮಾಣ ಮಾಡಬೇಕಾಗಿದೆ ಎಂದರು.

ಈ ಸಂದರ್ಭದಲ್ಲಿ. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಾಲಪ್ಪ ನಾಯಕ ಹಾಗೂ ಬಾಬು ಚಿನ್ನು.ಆಪ್ತಸಮಾಲೋಚಕರಾದ ದೀಪಾ.ಅರುಣು ಕುಲಕರ್ಣಿ.ಹಿರಿಯ ಆರೋಗ್ಯ ನಿರೀಕ್ಷಣಾ ಅಧಿಕಾರಿಗಳಾದ ಸುಧೀರ್ ಬಾಬು ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳಾದ ಚೈತ್ರಾ ಮತ್ತು ಗೌರಮ್ಮ ಸಾರ್ವಜನಿಕರು ಉಪಸ್ಥಿತರಿದ್ದರು.

## ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ಲೋಕಾರ್ಪಣೆಗೊಳಿಸಿದ ಸಚಿವ ಡಾ.ಶರಣಪ್ರಕಾಶ್ ಪಾಟೀಲ್



**ಸೇಡಂ,ಜೂ 25–** ತಾಲೂಕಿನ ಕುರಕುಂಟಾ ಗ್ರಾಮದಲ್ಲಿನೂತನವಾಗಿ ನಿರ್ಮಿಸಿರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡವನ್ನು ವೈದ್ಯಕೀಯ ಶಿಕ್ಷಣ ಸಚಿವರು ಶಾಸಕರಾದ ಡಾ.ಶರಣಪ್ರಕಾಶ್ ಪಾಟೀಲ್ ಅವರು ಲೋಕಾರ್ಪಣೆಗೊಳಸಿ ಮಾತನಾಡಿದರು.ಈ ವೇಳೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಶರಣಬಸಪ್ಪ ಕ್ಯಾತನಾಳ್ , ಸಹಾಯಕ ಆಯುಕ್ತರಾದ ಪ್ರಭುರೆಡ್ಡಿ, ತಹಸಿಲ್ದಾರ್ ಶ್ರೇಯಾಂಕ್ ಧನುಶ್ರೀ,ತಾಲೂಕ ಆರೋಗ್ಯ ಅಧಿಕಾರಿಗಳಾದ ಡಾ.ಸಂಜೀವ ಪಾಟೀಲ್,ತಾಲೂಕ ಹಿರಿಯ ಆರೋಗ್ಯ ನಿರೀಕ್ಷಣ ಅಧಿಕಾರಿಗಳಾದ ಶ್ರೀ ಶಿವಯೋಗಿ ಸಕ್ವಾಲ್,ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿಗಳಾದ ಶ್ರೀಮತಿ ಶ್ವೇತಾ ಡಾ.ರೇಖಾ, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷ ಅಧಿಕಾರಿಗಳಾದ ಶ್ರೀಮತಿ ಶಕುಂತಲಾ,ಕುಮಾರಿ ಪ್ರೀತಿ,ಶ್ರೀಮತಿ ಜ್ಯೋತಿ ಲಿಂಗಪಲ್ಲಿ ಹಾಗೂ ಇಲಾಖೆಯ ಎಲ್ಲಾ ಸಿಬ್ಬಂದಿಗಳು ಹಾಗೂ ಕಾಂಗ್ರೆಸ್ ಮುಖಂಡರಾದ ರಾಮಯ್ಯ ಪೂಜಾರಿ, ಅಣವೀರಪ್ಪ ದೇಸಾಯಿ, ಲಿಂಗರಾಜ ಕಪನೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮುಖ್ಯಮಂತ್ರಿಗಳ ಕಾರ್ಯಕ್ರಮ ಯಶಸ್ಸು: ಶಾಸಕರಾದ ಬಸನಗೌಡ ದದ್ದಲ್ ಅಭಿನಂದನೆ



**ರಾಯಚೂರು,ಜೂ.25–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರ ಆಶ್ರಯದಲ್ಲಿ ಜೂನ್ 23ರಂದು ರಾಯಚೂರು ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ಯರಗೇರಾ ಗ್ರಾಮದಲ್ಲಿ ನಡೆದ ಬುಡಕಟ್ಟು ಸಾಂಸ್ಕೃತಿಕ ಉತ್ಸವ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ನಾಮಫಲಕ ಅನಾವರಣ, 371(ಜೆ) ದಶಮಾ ನೋತ್ಸವ ಮತ್ತು 936 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನೆ ಕಾರ್ಯ ಕ್ರಮದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಸಂಸದರಾದ (ರಾಜ್ಯ ಸಭೆ) ಡಾ.ಮಲ್ಲಿಕಾರ್ಜುನ ಖರ್ಗೆ, ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಮತ್ತು ಸಚಿವರು, ಶಾಸಕರು ಸೇರಿದಂತೆ ಅನೇಕ ಗಣ್ಯ ಮಹನಿಯರು ಮತ್ತು ಕ್ಷೇತ್ರದ ಜನರು ಭಾಗಿಯಾಗಿ ಯಶಗೊಳಿಸಿದ್ದು ತಮಗೆ ಸಂತಸ ತಂದಿದೆ ಎಂದು ಕರ್ನಾಟಕ ಶ್ರೀ ಮಹರ್ಷಿ ವಾಲ್ಮೀಕಿ ಪರಿಶಿಷ್ಠ ಪಂಗಡ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಶಾಸಕರಾದ ಬಸನಗೌಡ ದದ್ದಲ್ ಅವರು ತಿಳಿಸಿದ್ದಾರೆ.

ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಯರಗೇರಾ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕ್ಷೇತ್ರದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ನೆರೆದು ಕಾರ್ಯಕ್ರಮದ ಮೆರಗನ್ನು ಹೆಚ್ಚಿಸಿದರು. ಜೊತೆಗೆ ಬುಡಕಟ್ಟು ಸಾಂಸ್ಕೃತಿಕ ಕಾರ್ಯಕ್ರಮದ ಸೊಬಗನ್ನು ಕಣ್ತುಂಬಿಕೊಂಡರು. ವಿಶೇಷವಾಗಿ ತಾಯಂದಿರು, ಸಹೋದರಿಯರು ಸೇರಿದಂತೆ ಸಾರ್ವಜನಿಕರು ಉತ್ಸುಕರಾಗಿ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಿದ್ದು ತಮಗೆ ಸಂತಸ ತಂದಿದೆ.

ಈ ಅಭೂತಪೂರ್ವ ಕಾರ್ಯಕ್ರಮದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಸಂಸದರಾದ (ರಾಜ್ಯ ಸಭೆ) ಡಾ.ಮಲ್ಲಿಕಾರ್ಜುನ ಖರ್ಗೆ, ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಸಚಿವರು, ಶಾಸಕರು ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿ ಸಂತೋಷವನ್ನು ಹೆಚ್ಚಿಸಿದ್ದಾರೆ. ಹಾಗಾಗಿ ಮಾನ್ಯ ಡಾ.ಮಲ್ಲಿಕಾರ್ಜುನ ಖರ್ಗೆ, ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಿಗೆ, ಎಲ್ಲ ಸಚಿವ ರಿಗೆ, ಶಾಸಕರು, ವಿಧಾನ ಪರಿಷತ್ ಸದಸ್ಯರಿಗೆ, ವಿವಿಧ ನಿಗಮ, ಸಮಿತಿ, ಮಂಡಳಿ, ಪ್ರಾಧಿಕಾರಗಳ ಅಧ್ಯಕ್ಷರು, ಸದಸ್ಯರಿಗೆ, ನಾಮ ನಿರ್ದೇಶಿತ ಸದಸ್ಯರು ಹಾಗೂ ಇನ್ನಿತರ ಎಲ್ಲ ಗಣ್ಯ ಮಹನಿಯರಿಗೆ, ಕಾರ್ಯಕ್ರಮಕ್ಕೆ ಎಲ್ಲಾ ರೀತಿಯ ಸಹಕಾರ ನೀಡಿದ ಎಲ್ಲ ಮುಖಂಡರಿಗೆ, ಕಾರ್ಯಕರ್ತರಿಗೆ, ಅಭಿಮಾ ನಿಗಳಿಗೆ ಅಭಿನಂದನೆಗಳನ್ನು ತಿಳಿಸುವೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಪೋಲಿಸ್ ಇಲಾಖೆ ಸೇರಿದಂತೆ ಇನ್ನಿತರ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯಕ್ರಮದಲ್ಲಿ ಸಕ್ರಿಯ ಭಾಗಿಯಾಗಿದ್ದಾರೆ. ಪತ್ರಿಕಾ ಹಾಗೂ ವಿದ್ಯುನ್ಮಾನ ಮಾಧ್ಯಮದ ಪ್ರತಿನಿಧಿಗಳು ಈ ಕಾರ್ಯಕ್ರಮಕ್ಕೆ ವಿಶೇಷ ಪ್ರಚಾರ ನೀಡಿದ್ದಾರೆ. ಈ ಕಾರ್ಯಕ್ರಮಕ್ಕೆ ಪ್ರತ್ಯೇಕ್ಷವಾಗಿ, ಪರೋಕ್ಷವಾಗಿ ಶ್ರಮಿಸಿದ ಎಲ್ಲರಿಗೂ ಅಭಿನಂದಿಸುವೆ, ಧನ್ಯವಾದಗಳನ್ನು ಹೇಳುವೆ ಎಂದು ಶಾಸಕರಾದ ಬಸವನಗೌಡ ದದ್ದಲ್ ಅವರು ತಿಳಿಸಿದ್ದಾರೆ.

# ಜೂನ್ 28ರವರೆಗೆ ವಿಶೇಷ ಲಸಿಕಾ ಅಭಿಯಾನ

**ರಾಯಚೂರು,ಜೂ.25–**ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಜೂನ್ 28 ರವರೆಗೆ ವಿಶೇಷ ಲಸಿಕಾ ಅಭಿಯಾನ ನಡೆಯಲಿದ್ದು, ಪ್ರತಿ ಮಂಗಳವಾರ ಮತ್ತು ಗುರುವಾರ ಲಸಿಕಾ ಕಾರ್ಯಕ್ರಮ ಜರುಗುತ್ತಿದೆ. ವಿಶೇಷ ಲಸಿಕಾ ಸಪ್ತಾಹ ಕಾರ್ಯಕ್ರಮದಲ್ಲಿ ಮಕ್ಕಳನ್ನು ಕಾಡುವ 12 ಮಾರಕ ರೋಗಗಳ ನಿಯಂತ್ರಣದ ಲಸಿಕೆಗಳನ್ನು ಹಾಕಲಾಗುತ್ತದೆ.

ಲಸಿಕೆ ಪಡೆಯದೇ ಇರುವ ಹಾಗೂ ಬಿಟ್ಟು ಹೋದ ಮಕ್ಕಳಿಗೆ ಸಾರಿಗೆ ವ್ಯವಸ್ಥೆ ಇಲ್ಲದ ದೊಡ್ಡಿ, ತಾಂಡಾ ಹಾಗೂ ನಗರದ ಕೊಳೆಗೇರಿ ಪ್ರದೇಶಗಳಲ್ಲಿ ಅಚ್ಚುಕಟ್ಟಾಗಿ ಲಸಿಕೆ ಹಾಕಲಾಗುವುದು. ಪೆಂಟಾದ ಮೊದಲನೇ ಡೋಸ್ ಪಡೆಯದೇ ಇರುವ ಮಕ್ಕಳಿಗೆ ಮತ್ತು ಎಂ.ಆರ್–1 ಹಾಗೂ 2ರ ಲಸಿಕೆ ವಂಚಿತ ಮಕ್ಕಳಿಗೆ ವಿಶೇಷ ಲಸಿಕಾ ಅಭಿಯಾನ ನಡೆಸಲಾಗುತ್ತದೆ.

ಜಿಲ್ಲೆಯಾದ್ಯಂತ ಎಲ್ಲಾ ನಗರ ಆರೋಗ್ಯ ಕೇಂದ್ರಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಾರ್ವಜನಿಕ ಆಸ್ಪತ್ರೆಗಳಲ್ಲಿ ಲಸಿಕೆ ನೀಡಲಾಗುತ್ತಿದ್ದು, ಸಾರ್ವಜನಿಕರು ತಮ್ಮ ತಮ್ಮ ಮನೆಗಳಲ್ಲಿರುವ ಲಸಿಕಾ ವಂಚಿತ ಮಕ್ಕಳನ್ನು ಲಸಿಕಾ ಕೇಂದ್ರಕ್ಕೆ ಕರೆದುಕೊಂಡು ಬಂದು ಲಸಿಕೆ ಹಾಕಿಸುವುದರ ಮೂಲಕ ಈ ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಹಾಗೂ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂನ್ 27ರಂದು ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

**ರಾಯಚೂರು,ಜೂ.25–** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1ರ 110 ಕೆ.ವಿವಿದ್ಯುತ್ ಉಪ ಕೇಂದ್ರ ಮಲಿಯಾಬಾದ್ ವ್ಯಾಪ್ತಿಗೆ ಬರುವ 11 ಕೆ.ವಿ ಮಾರ್ಗದ ಮೊದಲನೇ ತ್ರೈಮಾಸಿಕ ನಿರ್ವಹಣೆ ಪ್ರಯುಕ್ತ ಜೂನ್ 27ರ ಬೆಳಿಗ್ಗೆ 09 ಗಂಟೆಯಿಂದ ಮಧ್ಯಾಹ್ನ 03 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ ನವೋದಯ ಆಸ್ಪತ್ರೆ, ಅನುಷಾ ನಗರ, ಕೆ.ಎಮ್ ಕಾಲೋನಿ, ಆರ್.ಟಿ.ಓ ಸರ್ಕಲ್, ಸತ್ಯನಾಥ ಕಾಲೋನಿ, ಬಿ.ಆರ್.ಬಿ ಸರ್ಕಲ್, ಯರಗೇರಾ ಲೇಔಟ್, ಮಾಣಿಕ್ ನಗರ, ಜಹೀರಾಬಾದ್, ಅಂಬೇಡ್ಕರ್ ಭವನ, ಅಶೋಕ ನಗರ, ಶಶಿಮಹಲ್ ವೃತ್ತ, ಮೋಚಿವಾಡ, ಸರಫ್ ಬಜಾರ್, ಗೀತಾ ಮಂದಿರ, ಬ್ರೇಸ್ತವಾರ ಪೇಟೆ, ಶೆಟ್ಟಿಬಾವಿ ಚೌಕ್, ಪೂರ್ಣಿಮಾ ಇಂಟರ್ ನ್ಯಾಷನಲ್ ಸ್ಕೂಲ್, ಟ್ಯಾಗೋರ್ ಪಾಲಿಟೆಕ್ನಿಕ್ ಕಾಲೇಜ್, ಮಾರುತಿ ನಗರ, ಆಲ್ ಇಂಡಿಯಾ ರೇಡಿಯೋ ಸ್ಟೇಷನ್, ಐ.ಡಿ.ಎಸ್.ಎಮ್.ಟಿ ಲೇಔಟ್, ಜ್ಯೋತಿ ಕಾಲೋನಿ, ಬಶೀರ್ ಬಾಗ್ ಲೇಔಟ್, ಐ.ಬಿ. ಕಾಲೋನಿ, ರಾಧಕೃಷ್ಣ ಕಾಲೋನಿ, ಸೂರ್ಯ ನಗರ, ಗಂಗಾ ಪರಮೇಶ್ವರಿ ಲೇಔಟ್, ನವೀನ್ ಆಸ್ಪತ್ರೆ, ಟೆಲಿಕಾಂ ಕಾಲೋನಿ, ಅಂಬೇಡ್ಕರ್ ಕಾಲೋನಿ, ಆರ್.ಆರ್.ಕಾಲೋನಿ, ರಾಮಲಿಂಗೇಶ್ವರ ಲೇಔಟ್ ಸೇರಿದಂತೆ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ 08532–226386, 08532–231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಧಿಕಾರ ಶಾಶ್ವತವಲ್ಲ, ಮಾಡಿರುವ ಕಾರ್ಯ ಶಾಶ್ವತ: ಯತ್ನಾಳ

**ವಿಜಯಪುರ,ಜೂ.25–** ಅಧಿಕಾರ ಶಾಶ್ವತವಲ್ಲ. ನಾವು ಮಾಡಿರುವ ಕೆಲಸ ಕಾರ್ಯಗಳು ಶಾಶ್ವತವಾಗಿ ಉಳಿಯುತ್ತವೆ. ಹಾಗೇ ವಿಜಯಪುರ ನಗರವನ್ನು ಮಾದರಿ ನಗರವನ್ನಾಗಿ ಅಭಿವೃದ್ಧಿ ಪಡಿಸಿ, ಜನರ ವಿಶ್ವಾಸ ಉಳಿಸಿಕೊಂಡಿರುವೆ ಎಂದು ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಹೇಳಿದರು.

ನಗರದ ವಾರ್ಡ್ ನಂ.33 ರ ಅತಾಲಟ್ಟಿ ಮುಖ್ಯ ರಸ್ತೆಯಿಂದ ಮದೀನಾ ನಗರದ ವರೆಗೆ ಮತ್ತು ಮದೀನಾ ನಗರದಿಂದ ಸಾಯಿ ನಗರದ ವರೆಗೆ ಸಿಸಿ ರಸ್ತೆ ಅಭಿವೃದ್ಧಿ ಪಡಿಸುವುದು ಹಾಗೂ ಅತಾಲಟ್ಟಿ ಮುಖ್ಯ ರಸ್ತೆಯಿಂದ ಮದೀನಾ ನಗರ ಮೂಲಕ ಸಾಯಿ ನಗರ ವರೆಗೆ ರೂ.1.5 ಕೋಟಿ ಅನುದಾನದಲ್ಲಿ ಆಂತರಿಕ ಒಳಚರಂಡಿ ಅಭಿವೃದ್ಧಿ ಪಡಿಸುವ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

2018ರ ಚುನಾವಣೆಯಲ್ಲಿ ನನ್ನ ಮೇಲೆ ಬಹುದೊಡ್ಡ ಸವಾಲ್ ಇತ್ತು. ನಗರದಲ್ಲಿ ಎಲ್ಲಿ ಹುಡುಕಿದರೂ ಒಂದು ಒಳ್ಳೆಯ ರಸ್ತೆ ಇರಲಿಲ್ಲ, ಚರಂಡಿ ವ್ಯವಸ್ಥೆಯೂ ಇರಲಿಲ್ಲ. ಎಲ್ಲಿ ನೋಡಿದರಲ್ಲಿ ಧೂಳು. ನಗರ ಜನತೆಯ ಆಶೀರ್ವಾದದಿಂದ ಗೆದ್ದು, ಧೂಳಾಪುರವನ್ನು ಮಾದರಿ ನಗರವನ್ನಾಗಿ ಅಭಿವೃದ್ಧಿ ಪಡಿಸಿ, ಜನರು ನನ್ನ ಮೇಲೆ ಇಟ್ಟ ವಿಶ್ವಾಸ ಉಳಿಸಿಕೊಂಡಿದಲ್ಲದೆ, ದೇಶದಲ್ಲೇ ಅತ್ಯಂತ ಶುದ್ಧ ಗಾಳಿ ಇರುವ ನಗರದ ಪಟ್ಟಿಯಲ್ಲಿ ವಿಜಯಪುರ ನಗರ 3ನೇ ಸ್ಥಾನಕ್ಕೆ ತಂದಿರುವ ಹೆಮ್ಮೆಯಿದೆ. ಇದುವೆ ನಾನು ಮಾಡಿರುವ ಅಭಿವೃದ್ಧಿಗೆ ಸಾಕ್ಷಿ ಎಂದರು.




ಸಾರ್ವಜನಿಕ ಉಪಯೋಗಕ್ಕೆ ಮೀಸಲಿಟ್ಟ ಜಾಗಗಳನ್ನು ಉದ್ಯಾನ, ಓಪನ್ ಜಿಮ್, ಯೋಗಾ ಕೇಂದ್ರ ಮತ್ತಿತರೆ ಸಾರ್ವಜನಿಕ ಉದ್ದೇಶಕ್ಕಾಗಿಯೇ ಬಳಸಬೇಕು. ಸ್ವತ ನಾನು ಉಪಯೋಗಿಸಲು ಬಂದರೂ ನನ್ನನ್ನೂ ಕೇಳಬೇಡಿ. ಯಾರಾದರೂ ಸಾರ್ವಜನಿಕ ಉದ್ದೇಶದ ಜಾಗ ಕಬಳಿಸಲು ಯತ್ನಿಸಿದರೆ ತಕ್ಷಣ ತಿಳಿಸಿ, ಸರಿಯಾಗಿ ಕ್ರಮ ಕೈಗೊಳ್ಳೋಣ ಎಂದು ಕಿವಿಮಾತು ಹೇಳಿದರು.

ಮಹಾನಗರ ಪಾಲಿಕೆ ಸದಸ್ಯರಾದ ಪ್ರೇಮಾನಂದ ಬಿರಾದಾರ, ರಾಜಶೇಖರ ಕುರಿಯವರ, ಬಿಜೆಪಿ ನಗರ ಮಂಡಲ ಮಾಜಿ ಅಧ್ಯಕ್ಷ ಶಂಕರ ಹೂಗಾರ, ಮುಖಂಡರಾದ ವಿಠ್ಠಲ ನಡುವಿನಕೇರಿ, ಆನಂದ ಹಂಜಿ ಸೇರಿದಂತೆ ಮುಖಂಡರು, ಕಾರ್ಯಕರ್ತರು ಹಾಗೂ ಸ್ಥಳೀಯ ನಿವಾಸಿಗಳು ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಆಕಾಶಕ್ಕೆ ಹಾರಿದ ಶುಭಾಂಶು, ಬಾಹ್ಯಕಾಶ ತಲುಪಿದ ಮೊದಲ ಭಾರತೀಯ

**ಫ್ಲೋರಿಡಾ, ಜೂ.25–** ಹವಾಮಾನ ವೈಪರಿತ್ಯ, ಆಮ್ಲಜನಕ ಸೋರಿಕೆ ಸೇರಿದಂತೆ ವಿವಿಧ ಕಾರಣಗಳಿಂದ ಹಲವು ಭಾರಿ ಮುಂದೂಡಲ್ಪಟ್ಟಿದ್ದ ಆಕ್ಸಿಯಮ್ –4 ಮಿಷನ್‌ನ ಫಾಲ್ಕನ್ 9 ರಾಕೆಟ್ ಭಾರತೀಯ ಕಾಲಮಾನ ಬುಧುವಾರ ಮಧ್ಯಾಹ್ನ 12.01ಕ್ಕೆ ಅಮೇರಿಕಾದ ಫ್ಲೋರಿಡಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಯಶಸ್ವಿ ಉಡಾವಣೆಗೊಂಡಿದ್ದು ಹೊಸ ಅಧ್ಯಾಯಕ್ಕೆ ಮುನ್ನುಡಿ ಬರೆದಿದೆ. ಈ ಮೂಲಕ ಅಂತರಿಕ್ಷ ಯಾನದಲ್ಲಿ ಭಾರತದ ಮತ್ತೊಂದು ಮೈಲಿಗಲ್ಲು ಸಾಧಿಸಿದೆ.

ನಿಗದಿತ ಸಮಯಕ್ಕೆ ನಭಕ್ಕೆ ರಾಕೆಟ್ ಜಿಗಿಯುತ್ತಿದ್ದಂತೆ ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ "ಕಮಾಲ್ ಕೀ ರೈಡ್" ಎನ್ನುವ ಮೊದಲ ಮಾತು ಖಗೋಳ ವಿಜ್ಞಾನಿಗಳು ಹಾಗು ಬಾಹ್ಯಾಕಾಶ ವಿಜ್ಞಾನಿಗಳಲ್ಲಿ ಸಂತಸ ಮನೆ ಮಾಡಿದೆ..ಅದರಲ್ಲಿಯೂ ಶುಭಾಂಶು ಶುಕ್ಲಾ ಮತ್ತವರ ಕುಟುಂಬಸ್ಥರು, ಸ್ನೇಹಿತರ ಸಂತೋಷಕ್ಕೆ ಪಾರವೇ ಇರಲಿಲ್ಲ, ತಾಯಿ, ತಂದೆ ಸೇರಿದಂತೆ ಅನೇಕರು ಅಪರೂಪದ ಕ್ಷಣಕ್ಕೆ ಸಾಕ್ಷಿಯಾದರು

ಆಕ್ಸಿಯಮ್ 4 ಸ್ಪೇಸ್ ಮಿಷನ್ ಮೂಲಕ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಸೇರಿದಂತೆ ನಾಲ್ವರು ಗಗನಯಾತ್ರಿಗಳಿದ್ದ ಸ್ಪೇಸ್‌ಎಕ್ಸ್‌ನ ಡ್ರ್ಯಾಗನ್ ಬಾಹ್ಯಾಕಾಶ ನೌಕೆಯಲ್ಲಿ ಯಶಸ್ವಿಯಾಗಿ ಉಡಾವಣೆಗೊಂಡಿತು. ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ 14 ದಿನಗಳ ವೈಜ್ಞಾನಿಕ ಕಾರ್ಯಾಚರಣೆ ನಡೆಸಲಿದ್ದಾರೆ.

ಅಮೆರಿಕದ ಫ್ಲೋರಿಡಾದಲ್ಲಿರುವ ನಾಸಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಆಕ್ಸಿಯಮ್ –4 ಮಿಷನ್ ಯಶಸ್ವಿಯಾಗಿ ಉಡಾವಣೆಯಾಗುತ್ತಿದ್ದಂತೆ ದೆಹಲಿಯಲ್ಲಿ ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್, ಭಾರತದಲ್ಲಿರುವ ಆಸ್ಟ್ರೇಲಿಯಾದ ಹೈಕಮಿಷನರ್ ಫಿಲಿಪ್ ಗ್ರೀನ್, ದಕ್ಷಿಣ ಆಸ್ಟ್ರೇಲಿಯಾದ ಗವರ್ನರ್ ಫ್ರಾನ್ಸಿಸ್ ಆಡಮ್ಸನ್ ಎಸಿ ಮತ್ತಿತರು ಚಪ್ಪಾಳೆ ತಟ್ಟಿ ಗಗನಯಾತ್ರಿಗಳ ಪಯಣಕ್ಕೆ ಶುಭ ಹಾರೈಸಿದರು.

ಈ ವೇಳೆ ಪ್ರತಿಕ್ರಿಯಿಸಿದ ಡಾ, ಜಿತೇಂದ್ರ ಸಿಂಗ್, ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರಿಗೆ ಅಭಿನಂದನೆಗಳು –ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಹಾರಾಟ ನಡೆಸಿದ ಗಗನಯಾತ್ರಿ ಎನ್ನುವುದು ನಿಜಕ್ಕೂ ಭಾರತಕ್ಕೆ ಹೆಮ್ಮೆಯ ಕ್ಷಣ ಎಂದಿದ್ದಾರೆ

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಪರಿಚಯಿಸಿದ ಸುಧಾರಣೆಗಳಿಂದಾಗಿ ಬೆಳೆಯುತ್ತಿರುವ ಜಾಗತಿಕ ಸಹಯೋಗಗಳು ಭಾರತವನ್ನು ಬಾಹ್ಯಾಕಾಶ ಪರಿಶೋಧನೆಯಲ್ಲಿ ಮುಂಚೂಣಿಯಲ್ಲಿರುವ ರಾಷ್ಟವನ್ನಾಗಿ ಮಾಡಿದೆ ಎಂದಿದ್ದಾರೆ.

ಈ ನಡುವೆ ಶುಭಾಂಶು ಶುಕ್ಲಾ ಅವರ ಸಂಬಂಧಿಕರು ಮತ್ತು ಸ್ನೇಹಿತರು ಸಂತೋಷದ ಕ್ಷಣದಲ್ಲಿ ಭಾಗಿಯಾದರು.ವಾಣಿಜ್ಯ ಸಿಬ್ಬಂದಿ ವಿಮಾನದಲ್ಲಿ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ತಲುಪಿದ ಮೊದಲ ಭಾರತೀಯ ಎನ್ನುವ ಹೆಗ್ಗಳಿಕೆಗೆ ಪಾತ್ರರಾಗಿದ್ದು ಕುಟುಂಬ ಮತ್ತು ರಾಷ್ಟ್ರ ಎರಡಕ್ಕೂ ಒಂದು ಮೈಲಿಗಲ್ಲು ಎಂದು ಕುಟುಂಬಸ್ಥರು ಸ್ನೇಹಿತರು ಸಂತಸ ಹಂಚಿಕೊಂಡಿದ್ದಾರೆ.



1985ರಲ್ಲಿ ಮೊದಲ ಬಾರಿಗೆ ಗಗನಯಾನ ಕೈಗೊಂಡಿದ್ದ ರಾಕೇಶ್ ಶರ್ಮಾ ಬಳಿಕ ಎರಡನೇ ಭಾರತೀಯ ಎನ್ನುವ ಹಿರಿಮೆಗೆ ಶುಭಾಂಶು ಶುಕ್ಲಾ ಪಾತ್ರರಾಗಿದ್ದಾರೆ. 41 ವರ್ಷಗಳ ಬಳಿಕ ಭಾರತ ಎರಡನೇ ಬಾರಿಗೆ ಗಗನಯಾನ ಕೈಗೊಂಡಿದ್ದು ಮತ್ತೊಮ್ಮೆ ಹೊಸ ಮೈಲುಗಲ್ಲು ಸ್ಥಾಪಿಸಿದೆ.

ಫಾಲ್ಕನ್ 9 ರಾಕೆಟ್ ಮೂಲಕ ಉಡಾವಣೆ ಮಾಡಲಾದ ಸ್ಪೇಸ್‌ಎಕ್ಸ್ ಕ್ರೂ ಡ್ರ್ಯಾಗನ್ ಕ್ಯಾಪ್ಸುಲ್ ಈ ತಂಡದಲ್ಲಿ ಅಮೆರಿಕದ ಕಮಾಂಡರ್ ಪೆಗ್ಗಿ ವಿಟ್ಸನ್, ಪೋಲೆಂಡ್‌ನ ಸ್ಲಾವೋಸ್ಜ್ ಉಜ್ನಾನ್ಸ್ಕಿ–ವಿಸ್ನಿಯೆವ್ಸ್ಕಿ ಮತ್ತು ಹಂಗೇರಿಯ ಟಿಬೋರ್ ಕಾಪು ಜೊತೆ ಶುಭಾಂಶು ಶುಕ್ಲಾ ಗಗನಯಾನ ಕೈಗೊಂಡಿದ್ದಾರೆ.

ಎರಡು ವಾರಗಳ ಕಾರ್ಯಾಚರಣೆಯಲ್ಲಿ, ಗಗನಯಾತ್ರಿಗಳು ಇಸ್ರೋ ವಿನ್ಯಾಸಗೊಳಿಸಿದ ಏಳು ಪ್ರಯೋಗಗಳು ಸೇರಿದಂತೆ ಸುಮಾರು 60 ವೈಜ್ಞಾನಿಕ ಪ್ರಯೋಗ ನಡೆಸಲಿದ್ದಾರೆ, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ– ಇಸ್ರೋ ಸೇರಿದಂತೆ ಇಡೀ ದೇಶ ಕಾತುರದಿಂದ ಕಾದು ನೋಡುತ್ತಿದೆ.

ಗಗನಯಾತ್ರಿಗಳು ಸಾಮಾನ್ಯವಾಗಿ ಹಗುರವಾದ ಮಾವಿನ ಮಕರಂದ, ಕ್ಯಾರೆಟ್ ಹಲ್ವಾ ಮತ್ತು ಹೆಸರು ಬೇಳೆ ಹಲ್ವಾವನ್ನು ಬಾಹ್ಯಾಕಾಶಕ್ಕೆ ಕೊಂಡೊಯ್ಯುದ್ದಿದ್ದಾರೆ.

1985 ರಲ್ಲಿ ಜನಿಸಿದ ಶುಭಾಂಶು ಶುಕ್ಲಾ, ಭಾರತೀಯ ವಾಯುಪಡೆಯ ಪೈಲಟ್ ಆಗಿದ್ದು, ರಾಕೇಶ್ ಶರ್ಮಾ ಅವರ ಪ್ರಯಾಣದಿಂದ ಪ್ರೇರಿತರಾಗಿ ಈಗ ಗಗನಯಾನ ಕೈಗೊಂಡಿದ್ದಾರೆ.

ಗಗನಯಾನ ಕೈಗೊಳ್ಳುವ ಮುನ್ನ ಮಾಹಿತಿ ಹಂಚಿಕೊಂಡ ಶುಭಾಂಶು ಶುಕ್ಲಾ, "ಬಾಹ್ಯಾಕಾಶದಲ್ಲಿ ತಿನ್ನಲು ಸಾಕಷ್ಟು ಆಹಾರವಿದೆ. ಮಾವಿನ ಮಕರಂದ, ಕ್ಯಾರೆಟ್ ಹಲ್ವಾ ಮತ್ತು ಹೆಸರು ಬೇಳೆ ಹಲ್ವಾವನ್ನು ಕೊಂಡೊಯ್ಯುತ್ತೇನೆ" ಎಂದು ತಿಳಿಸಿದ್ದಾರೆ

ದೇಶದ ಮೊದಲ ಗಗನಯಾತ್ರಿ ರಾಕೇಶ್ ಶರ್ಮಾ ಅವರನ್ನು ಮಾರ್ಗದರ್ಶಕ ಎಂದು ಪರಿಗಣಿಸುತ್ತಿದ್ದು, ಕಾರ್ಯಾಚರಣೆಗೆ ಹೇಗೆ ತಯಾರಿ ನಡೆಸಬೇಕು ಎಂಬುದು ಸೇರಿದಂತೆ ಹಲವು ವಿಷಯಗಳ ಬಗ್ಗೆ ಅವರು ನನಗೆ ಸಲಹೆ ನೀಡುತ್ತಿದ್ದಾರೆ" ಎಂದು ಹೇಳಿದ್ದಾರೆ.

**ಪತ್ನಿಗೆ ಶುಭಾಂಶು ಭಾವುಕ ಸಂದೇಶ**

ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರು ಇಂದು ಅಮೆರಿಕಾದ ಫ್ಲೋರಿಡಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಯಶಸ್ವಿ ಪ್ರಯಾಣ ಬೆಳಸಿದ್ದು ಈ ಪ್ರಯಾಣಕ್ಕೂ ಮುನ್ನ ಅವರು ತಮ್ಮ ಪತ್ನಿಗೆ ಸಂದೇಶವೊಂದನ್ನು ಕಳುಹಿಸಿದ್ದಾರೆ.

ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣಿಸುವ ಮುನ್ನ ತನ್ನ ಪತ್ನಿ ಕಾಮ್ನಾ ಶುಕ್ಲಾ ಅವರಿಗೆ ಬರೆದಿರುವ ವಿಶೇಷ ಸಂದೇಶವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ಶುಭಾಂಶು ಅವರು, ನಾವು 25ನೇ ತಾರೀಖಿನ ಮುಂಜಾನೆ ಈ ಗ್ರಹವನ್ನು ಬಿಡಲು ಯೋಜಿಸಿದ್ದೇವೆ. ಈ ಕಾರ್ಯಾಚರಣೆಯಲ್ಲಿ ಭಾಗಿಯಾಗಿರವ ಎಲ್ಲರಿಗೂ ಧನ್ಯವಾದ ಹೇಳುತ್ತೇನೆ. ಮನೆಯಲ್ಲಿರುವ ಎಲ್ಲರಿಗೂ ಅವರ ಪ್ರೀತಿ ಮತ್ತು ಆಶೀರ್ವಾದಕ್ಕಾಗಿ ಧನ್ಯವಾದಗಳು ಎಂದು ಇನ್‌ಸ್ಟಾಗ್ರಾಂನಲ್ಲಿ ಪೋಸ್ಟ್ ಮಾಡಿದ್ದಾರೆ.

ನನ್ನ ಜತೆ ಉತ್ತಮ ಒಡನಾಡಿಯಾಗಿದ್ದಕ್ಕೆ ನನ್ನ ಪತ್ನಿ (ಕಾಮ್ನಾ ಶುಕ್ಲಾ)ಗೆ ವಿಶೇಷ ಧನ್ಯವಾದ ಎಂದು ಅವರು ಭಾವನಾತ್ಮಕವಾಗಿ ಸಂದೇಶವನ್ನು ಕಳುಹಿಸಿದ್ದಾರೆ.

ಯಾವುದೇ ವ್ಯಕ್ತಿ ಒಬ್ಬಂಟಿಯಾಗಿ ಬಾಹ್ಯಾಕಾಶಕ್ಕೆ ಪ್ರಯಣಿಸುವುದಿಲ್ಲ.ನಾವು ಇದನ್ನು ಅನೇಕ ಜನರ ಹೆಗಲ ಮೇಲೆ ಕುಳಿತು ಮಾಡುತ್ತೇವೆ. ನಾನು ನಿಮಗೆಲ್ಲರಿಗೂ ಕೃತಜ್ಞನಾಗಿದ್ದೇನೆ ಎಂದು ಅವರು ಪೋಸ್ಟ್‌ನಲ್ಲಿ ಬರೆದಿದ್ದಾರೆ.

**ಕುಟುಂಬದ ಸಂತಸ:**

ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತಲುಪುತ್ತಿರುವ ಅವರ ಕುಟುಂಬ ಸಂತಸ ವ್ಯಕ್ತಪಡಿಸಿದ್ದು ಅವರ ತಾಯಿ ನಮ್ಮ ಸಂತಸಕ್ಕೆ ಪಾರವೇ ಇಲ್ಲ. ನನ್ನ ಸಂತಸವನ್ನು ಪದಗಳಲ್ಲಿ ವ್ಯಕ್ತಪಡಿಸಿಲು ಸಾಧ್ಯವಿಲ್ಲ. ಎಲ್ಲರೂ ನನ್ನ ಮಗನಿಗೆ ಶುಭ ಹಾರೈಸಿದ್ದಾರೆ ಎಂದು ಭಾವುಕವಾಗಿ ಹೇಳಿದ್ದಾರೆ.

# ಕರಾಳ ತುರ್ತು ಪರಿಸ್ಥಿತಿಯನ್ನು ಭಾರತೀಯ ಎಂದಿಗೂ ಮರೆಯುವುದಿಲ್ಲ : ಪ್ರಧಾನಿ ಮೋದಿ

**ನವದೆಹಲಿ, ಜೂ. 25–**ತುರ್ತು ಪರಿಸ್ಥಿತಿಯ ಸಮಯದಲ್ಲಿ ಸಂವಿಧಾನದ ಚೈತನ್ಯವನ್ನು ಉಲ್ಲಂಘಿಸಿದ ರೀತಿಯನ್ನು ಯಾವುದೇ ಭಾರತೀಯ ಎಂದಿಗೂ ಮರೆಯುವುದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಸಾಂವಿಧಾನಿಕ ತತ್ವಗಳನ್ನು ಬಲಪಡಿಸುವ ತಮ್ಮ ಸರ್ಕಾರದ ಬದ್ಧತೆಯನ್ನು ಅವರು ದೃಢಪಡಿಸಿ ದರು.ತುರ್ತು ಪರಿಸ್ಥಿತಿಯ 50 ನೇ ವರ್ಷಾಚರಣೆಕುರಿತು ಎಕ್ಸ್‌ನಲ್ಲಿ ಸರಣಿ ಪೋಸ್ಟ್ ಗಳಲ್ಲಿ,

ಇದು ಭಾರತದ ಪ್ರಜಾಪ್ರಭುತ್ವ ಇತಿಹಾಸದ ಅತ್ಯಂತ ಕರಾಳ ಅಧ್ಯಾಯಗಳಲ್ಲಿ ಒಂದಾಗಿದೆ ಎಂದು ಮೋದಿ ಹೇಳಿದರು.ಸಂವಿಧಾನದಲ್ಲಿ ಪ್ರತಿಪಾದಿಸಲಾದ ಮೌಲ್ಯಗಳನ್ನು ಬದಿಗಿಡಲಾಯಿತು, ಮೂಲಭೂತ ಹಕ್ಕುಗಳನ್ನು ಅಮಾನತು ಗೊಳಿಸಲಾಯಿತು, ಪತ್ರಿಕಾ ಸ್ವಾತಂತ್ರ್ಯವನ್ನು ಅಳಿಸಿಹಾಕಲಾಯಿತು ಮತ್ತು ಹೆಚ್ಚಿನ ಸಂಖ್ಯೆಯ ರಾಜಕೀಯ ನಾಯಕರು, ಸಾಮಾಜಿಕ ಕಾರ್ಯಕರ್ತರು, ವಿದ್ಯಾರ್ಥಿಗಳು ಮತ್ತು ಸಾಮಾನ್ಯ ನಾಗರಿಕರನ್ನುಜೈಲಿಗೆ ಹಾಕಲಾಯಿತು ಎಂದು ಅವರು ಗಮನಿಸಿದರು.

ಆ ಸಮಯದಲ್ಲಿ ಅಧಿಕಾರದಲ್ಲಿದ್ದ ಕಾಂ ಗ್ರೆಸ್ ಸರ್ಕಾರವು ಪ್ರಜಾಪ್ರಭುತ್ವವನ್ನು ಬಂಧನದಲ್ಲಿಟ್ಟಂತೆ ಇತ್ತು ಎಂದು ಪ್ರಧಾನಿ ಹೇಳಿದರು.ಕಳೆದ ವರ್ಷ ತುರ್ತು ಪರಿಸ್ಥಿತಿ





ವಾರ್ಷಿಕೋತ್ಸವವನ್ನು ಸಂವಿಧಾನ ಹತ್ಯೆ ದಿವಸ್ ಎಂದು ಆಚರಿಸಲಾಗುವುದು ಎಂದು ಮೋದಿ ಸರ್ಕಾರ ಘೋಷಿ ಸಿತ್ತು.ಸಂವಿಧಾನದಲ್ಲಿ ವ್ಯಾಪಕ ಬದಲಾ ವಣೆಗಳನ್ನು ಮಾಡಿದ ಮತ್ತು ಜನತಾ ಪಕ್ಷದ ಸರ್ಕಾರವು ಅದನ್ನು ರದ್ದುಗೊಳಿಸಿದ 42 ನೇ ತಿದ್ದುಪಡಿಯು ತುರ್ತು ಪರಿಸ್ಥಿತಿಯನ್ನು ವಿಧಿಸಿದ ಕಾಂಗ್ರೆಸ್ ಸರ್ಕಾರದ ಕುತಂತ್ರಗಳಿಗೆ ಒಂದು ಪ್ರಮುಖ ಉದಾಹರಣೆಯಾಗಿದೆ ಎಂದು ಅವರು ಹೇಳಿದರು.

ಬಡವರು, ಅಂಚಿನಲ್ಲಿರುವವರು ಮತ್ತು ತುಳಿತಕ್ಕೊಳಗಾದವರನ್ನು ವಿಶೇಷವಾಗಿ ಗುರಿಯಾಗಿಸಲಾಗಿದೆ, ಅವರ ಘನತೆಗೆ ಅವಮಾನ ಸೇರಿದಂತೆ.ನಮ್ಮ ಸಂವಿಧಾನದಲ್ಲಿನ ತತ್ವಗಳನ್ನು ಬಲಪಡಿಸುವ ಮತ್ತು ವಿಕಸಿತ್ ಭಾರತದ ನಮ್ಮ ದೃಷ್ಟಿಕೋನವನ್ನು ಸಾಕಾರಗೊಳಿಸಲು ಒಟ್ಟಾಗಿ ಕೆಲಸ ಮಾಡುವ ನಮ್ಮ ಬದ್ಧತೆಯನ್ನು ನಾವು ಪುನರುಚ್ಚರಿಸುತ್ತೇವೆ. ನಾವು ಪ್ರಗತಿಯ ಹೊಸ ಎತ್ತರವನ್ನು ಏರೋಣ ಮತ್ತು ಬಡವರು ಮತ್ತು ದೀನದಲಿತರ ಕನಸುಗಳನ್ನು ನನಸಾಗಿಸೋಣ ಎಂದು ಮೋದಿ ಹೇಳಿದರು.

ತುರ್ತು ಪರಿಸ್ಥಿತಿಯ ವಿರುದ್ಧದ ಹೋರಾಟದಲ್ಲಿ ದೃಢವಾಗಿ ನಿಂತ ಪ್ರತಿಯೊಬ್ಬ ವ್ಯಕ್ತಿಗೂ ನಮಸ್ಕರಿಸುತ್ತಾ, ಭಾರತದಾದ್ಯಂತ, ಎಲ್ಲಾ ಹಂತಗಳ, ವೈವಿಧ್ಯಮಯ ಸಿದ್ಧಾಂತಗಳ ಜನರು ಒಂದೇ ಗುರಿಯೊಂದಿಗೆ ಪರಸ್ಪರ ನಿಕಟವಾಗಿ ಕೆಲಸ ಮಾಡಿದರು: ಭಾರತದ ಪ್ರಜಾಪ್ರಭುತ್ವದ ರಚನೆಯನ್ನು ರಕ್ಷಿಸುವುದು ಮತ್ತು ಸ್ವಾತಂತ್ರ್ಯ ಹೋರಾಟಗಾರರು ತಮ್ಮ ಜೀವನವನ್ನು ಮುಡಿಪಾಗಿಟ್ಟ ಆದರ್ಶಗಳನ್ನು ಸಂರಕ್ಷಿಸುವುದು.

# ಶಾಸಕರೊಂದಿಗೆ ಸಿಎಂ ಸರಣಿ ಸಭೆ

**ಬೆಂಗಳೂರು,ಜೂ.25–** ದೆಹಲಿಯಿಂದ ಮರಳುತ್ತಿದ್ದಂತೆ ಶಾಸಕರ ಜೊತೆ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸರಣಿ ಸಭೆಗಳನ್ನು ನಡೆಸಲು ಮುಂದಾಗಿದ್ದಾರೆ.ಅಳಂದ ಕ್ಷೇತ್ರದ ಶಾಸಕ ಬಿ.ಆರ್.ಪಾಟೀಲ್, ಸಾಗರ ಕ್ಷೇತ್ರದ ಶಾಸಕ ವೇಣುಗೋಪಾಲ್, ಮೊಳಕಾಲುರು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ, ಕಾಗವಾಡ ಕ್ಷೇತ್ರದ ರಾಜು ಕಾಗೆ ಅವರ ಜೊತೆ ಪ್ರತ್ಯೇಕ ಚರ್ಚೆ ನಡೆಸಲು ಸಿದ್ದರಾಮಯ್ಯ ನಿರ್ಧರಿಸಿದ್ದಾರೆ.

ಇಷ್ಟೂ ಮಂದಿ ಶಾಸಕರು ಸರ್ಕಾರದ ವಿರುದ್ಧ ಬಹಿರಂಗ ಅಸಮಾಧಾನ ವ್ಯಕ್ತಪಡಿಸುವ ಮೂಲಕ ಸಚಿವರು ಹಾಗೂ ಅಧಿಕಾರಿಗಳ ನಡವಳಿಕೆಗೆ ಕಿಡಿಕಾರಿದ್ದಾರೆ.ಇದು ಸರ್ಕಾರಕ್ಕೆ ತೀವ್ರ ಮುಜುಗರ ಉಂಟುಮಾಡಿದ್ದು, ವಿರೋಧಪಕ್ಷ ಬಿಜೆಪಿ ಪ್ರತಿಭಟನೆಯ ಹಾದಿ ಹಿಡಿಯುವಂತೆ ಮಾಡಿದೆ.

ಬಿ.ಆರ್.ಪಾಟೀಲ್ ಹಾಗೂ ರಾಜು ಕಾಗೆ ತಮ ಹೇಳಿಕೆಗಳನ್ನು ಪದೇಪದೇ ಪುನರುಚ್ಚರಿಸುತ್ತಿದ್ದು, ನಡೆಯುತ್ತಿರುವುದನ್ನೆ ಹೇಳಿದ್ದೇವೆ, ಸತ್ಯ ಮಾತನಾಡಿದ್ದೇವೆ, ಈ ಸರ್ಕಾರದಲ್ಲಿ



ಶಾಸಕರಿಗೆ ಬೆಲೆ ಇಲ್ಲ ಎಂಬೆಲ್ಲಾ ಟೀಕೆಗಳನ್ನು ಮಾಡಿದ್ದಾರೆ. ಮೊಳಕಾಲುರು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ, ಗೃಹಸಚಿವ ಡಾ.ಜಿ.ಪರಮೇಶ್ವರ್ ಕಾಂಗ್ರೆಸ್ ಸರ್ಕಾರದಲ್ಲಿ ಹಣ ಇಲ್ಲ ಎಂದು ಹೇಳಿಕೆ ನೀಡಿ ಮುಜುಗರ ಉಂಟು ಮಾಡಿದ್ದರು. ಮಾರನೇ ದಿನವೇ ಯು–ಟರ್ನ್ ಪಡೆದಿದ್ದು, ನಾವು ಆ ರೀತಿ ಹೇಳಲಿಲ್ಲ ಎಂದಿದ್ದಾರೆ.

ಬೇಳೂರು ಗೋಪಾಲಕೃಷ್ಣ, ಸಚಿವ ಜಮೀರ್ ಅಹಮದ್ ಖಾನ್ ರಾಜೀನಾಮೆ ನೀಡಬೇಕು ಎಂದಿದ್ದರು. ಮಾರನೇ ದಿನ ಅವರೂ ಕೂಡ ತಮ ಹೇಳಿಕೆಯಿಂದ ಹಿಂದೆ ಸರಿದಿದ್ದಾರೆ. ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಬಸವರಾಜರಾಯರೆಡ್ಡಿ ಭ್ರಷ್ಟಾಚಾರ ಎಲ್ಲಾ ಕಾಲದಲ್ಲೂ ಇದೆ, ನಮ ಕಾಲದಲ್ಲೂ ಇದೆ ಎಂದು ಹೇಳುವ ಮೂಲಕ ಮತ್ತೊಂದು ರೀತಿಯ ಗೊಂದಲ ಹುಟ್ಟುಹಾಕಿದ್ದರು.

ಈ ಎಲ್ಲಾ ವಿಚಾರಗಳ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶಾಸಕರು, ಸಚಿವರ ಜೊತೆ ವೈಯಕ್ತಿಕವಾಗಿ ಚರ್ಚೆ ನಡೆಸಲಿದ್ದಾರೆ ಎನ್ನಲಾಗಿದೆ.ಮೊದಲಿಗೆ ಬಿ.ಆರ್.ಪಾಟೀಲರನ್ನು ಕರೆಸಿ ಮಾತುಕತೆ ನಡೆಸುವ ಸಾಧ್ಯತೆಯಿದೆ. ಎರಡು ದಿನಗಳಿಂದ ದೆಹಲಿ ಪ್ರವಾಸದಲ್ಲಿರುವ ಸಿದ್ದರಾಮಯ್ಯ ಇಂದು ವಾಪಸ್ ಮರಳಲಿದ್ದಾರೆ.

ಬಿ.ಆರ್.ಪಾಟೀಲ್ ಕೂಡ ತಾವು ಜೂ.25 ರಂದು ಸಿದ್ದರಾಮಯ್ಯನವರನ್ನು ಭೇಟಿ ಮಾಡುವುದಾಗಿ ಹೇಳಿದ್ದರು. ಹೀಗಾಗಿ ಇಂದು ಸಂಜೆಯಿಂದಲೇ ಶಾಸಕರೊಂದಿಗಿನ ಸರಣಿ ಸಮಾಲೋಚನೆ ಸಭೆಗಳು ಆರಂಭವಾಗುವ ಸಾಧ್ಯತೆಗಳಿವೆ.ಇದಕ್ಕೆ ಪೂರಕವಾಗಿ ಹೈಕಮಾಂಡ್ ಕೂಡ ಗೊಂದಲದ ಹೇಳಿಕೆಗಳಿಗೆ ಕಡಿವಾಣ ಹಾಕುವಂತೆ ಮುಖ್ಯಮಂತ್ರಿಯವರಿಗೆ ಹೇಳಿದ್ದು, ಶೀಘ್ರವೇ ಶಾಸಕಾಂಗ ಸಭೆ ಆಯೋಜಿಸುವ ನಿರೀಕ್ಷೆಗಳಿವೆ.

# ಕಲಬುರಗಿಯಲ್ಲಿ ಮೂವರ ಹತ್ಯೆ







**ಕಲಬುರಗಿ,ಜೂ.25–** ಹಳೆಯ ದ್ವೇಷದ ಕಿಚ್ಚಿನಲ್ಲಿ ಒಂದೇ ಕುಟುಂಬದ ಮೂವರನ್ನು ದುಷ್ಕರ್ಮಿಗಳು ಮಾರಾಕಾಸ್ತ್ರಗಳಿಂದ ಕೊಚ್ಚಿ ಕೊಂದು ಹಾಕಿದ ಭಯಾನಕ ಘಟನೆ ನಗರದ ಹೊರವಲಯದ ಪಟ್ಟಣ ಗ್ರಾಮದ ಡ್ರೈವರ್ ಧಾಬಾ ಬಳಿ ಕಳೆದ ರಾತ್ರಿ ನಡೆದಿದೆ. ಸಿದ್ದಾರೂಢ (32) , ಜಗದೀಶ್ (25) , ರಾಮಚಂದ್ರ (35) ಕೊಲೆಗೀಡಾದ ಸಂಬಂಧಿಕರು ಎಂದು ತಿಳಿದು ಬಂದಿದೆ.ಧಾಬಾದಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಡ್ರೈವರ್ ಧಾಬಾಗೆ ನುಗ್ಗಿದ ದುಷ್ಕರ್ಮಿಗಳು ಮಾರಾಕಾಸ್ತ್ರಗಳಿಂದ ಕೊಚ್ಚಿ ಮೂವರನ್ನೂ ಹತ್ಯೆಗೈದು ಪರಾರಿಯಾಗಿದ್ದಾರೆ.

**ಕೊಲೆಗೆ ಕಾರಣ:**ಎರಡು ಬಿಯರ್ ಬಿಲ್ ವಿಚಾರಕ್ಕೆ ನಡೆದ ಗಲಾಟೆಯಲ್ಲಿ ಸೋಮು ರಾಠೋಡ್ ಎಂಬಾತ ಧಾಬಾ ಮಾಲೀಕನ ಮೇಲೆ ಈ ಹಿಂದೆ ಹಲ್ಲೆ ಮಾಡಿದ್ದ. ಈ ಘಟನೆ ಬಳಿಕ ದಾಬಾ ಮಾಲೀಕ ಹಾಗೂ ಆತನ ಸಹಚರರು ಒಂದಾಗಿ ಸೋಮು ರಾಠೋಡನನ್ನು ನ.12, 2024ರಂದು ಧಾಬಾಕ್ಕೆ ಕರೆಸಿಕೊಂಡು ಹತ್ಯೆಗೈದಿದ್ದರು. ಸಾಲದೆಂಬಂತೆ, ಶವವನ್ನು ಬೈಕ್ ಹಿಂಭಾಗದಲ್ಲಿ ಬಿಗಿದು ಕಲಬುರಗಿ ಹೊರವಲಯದವರೆಗೆ ಎಳೆದೊಯ್ದು ಬಿಸಾಡಿದ್ದರು.ಈ ಕೊಲೆ ಆರೋಪಕ್ಕೆ ಸಂಬಂಧಿಸಿದಂತೆ ಧಾಬಾ ಮಾಲೀಕ ಸೇರಿ ಆತನ ಸಹಚರರು ಕಲಬುರಗಿ ಸೆಂಟ್ರಲ್ ಜೈಲು ಸೇರಿದ್ದರು. ಇತ್ತೀಚೆಗಷ್ಟೇ ಕೊಲೆ ಆರೋಪಿಗಳು ಜಾಮೀನು ಪಡೆದು ಜೈಲಿನಿಂದ ಹೊರಬಂದಿದ್ದರು. ಆರೋಪಿಗಳು ಜೈಲಿನಿಂದ ಹೊರಬಂದಿರುವ ಮಾಹಿತಿ ಅರಿತ ಹಿನ್ನೆಲೆಯಲ್ಲಿ ಸೋಮು ರಾಠೋಡ್ ಕೊಲೆಗೆ ಪ್ರತೀಕಾರವಾಗಿ ಈ ಮೂವರ ಹತ್ಯೆ ನಡೆದಿರಬಹುದು ಎಂದು ಪೊಲೀ ಸರು ಶಂಕೆ ವ್ಯಕ್ತಪಡಿಸಿದ್ದಾರೆ.ಕಲಬುರಗಿಯ ಸಬ್ ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಹಂತಕರ ಬಂಧನಕ್ಕೆ ಜಾಲ ಬೀಸಲಾಗಿದೆ ಎಂದು ಪೊಲೀಸ್ ಕಮಿಷನರ್ ಶರಣಪ್ಪ ಡಗೆ ತಿಳಿಸಿದ್ದಾರೆ.

# ಕಾಂಗ್ರೆಸ್ಸಿಗರು ಪಶ್ಚಾತಾಪ ಪಡಬೇಕು ; ಸಿಂಧಿಯಾ

**ಗ್ವಾಲಿಯರ್, ಜೂ.25–** ಐವತ್ತು ವರ್ಷಗಳ ಹಿಂದೆ ಇದೇ ದಿನದಂದು ಪಕ್ಷದ ಆಳ್ವಿಕೆಯಲ್ಲಿ ತುರ್ತು ಪರಿಸ್ಥಿತಿ ಹೇರಿ ದ್ದನ್ನು ನೆನಪಿಸಿಕೊಂಡ ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರು. ಪ್ರತಿ ವರ್ಷ ಜೂನ್ 25 ರಂದು ಕಾಂಗ್ರೆಸ್ ನಾಯಕರು ಪಶ್ಚಾತ್ತಾಪ ಪಡಬೇಕು ಎಂದು ಹೇಳಿದ್ದಾರೆ.

ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಅವರನ್ನು ಟೀಕಿಸಿದ ಸಿಂಧಿಯಾ. ಸಂವಿಧಾನದ ಪ್ರತಿಯೊಂದಿಗೆ ಸುತ್ತಲೂ ತಿರುಗಾಡುವುದರಿಂದ ಏನನ್ನೂ ಸಾಧಿಸಲಾ ಗುವುದಿಲ್ಲ ಎಂದು ಕಾಲೆಳೆದಿದ್ದಾರೆ.

ಮಧ್ಯಪ್ರದೇಶ ಹೈಕೋರ್ಟ್‌ನ ಗ್ವಾಲಿಯರ್ ಪೀಠದ ಆವರಣದಲ್ಲಿ ಸಂವಿಧಾನದ ಮುಖ್ಯ ಶಿಲ್ಪಿ ಅಂಬೇಡ್ಕರ್ ಅವರ ಪ್ರತಿಮೆಯನ್ನು ಸ್ಥಾಪಿಸಬೇಕೆಂದು ಕೋರಿ ಪಕ್ಷದ ನಾಯಕರು ಪ್ರತಿಭಟನೆ ನಡೆಸಿದ ಒಂದು ದಿನದ ನಂತರ, ಬಾಬಾಸಾಹೇಬ್ ಅಂಬೇಡ್ಕರ್ ಅವರ ಮೇಲೆ ಕಾಂಗ್ರೆಸ್ ರಾಜಕೀಯ ಮಾಡುತ್ತಿದೆ ಎಂದು ಅವರು ಆರೋಪಿಸಿದರು.

ಗ್ಯಾಂಡ್ ಓಲ್ಡ್ ಪಾರ್ಟಿ ಅಂಬೇಡ್ಕರ್ ವಿರುದ್ಧ ಅಭ್ಯರ್ಥಿಯನ್ನು ಕಣಕ್ಕಿಳಿಸುವ



ಮೂಲಕ ಚುನಾವಣೆಯಲ್ಲಿ ಅವರನ್ನು ಸೋ ಲಿಸಿದೆ ಎಂದು ಸಚಿವರು ಹೇಳಿದರು.ಜೂನ್ 25, 1975 ರಂದು (ತುರ್ತು ಪರಿಸ್ಥಿತಿ ಹೇರಿದಾಗ) ಬಾಬಾಸಾಹೇಬರ ಸಂವಿಧಾನವನ್ನು ಕರಾಳ ಅಧ್ಯಾಯವನ್ನಾಗಿ ತುಳಿದ ರಾಜಕೀಯ ಪಕ್ಷವು ಈಗ ಸಂವಿಧಾನದ ಬಗ್ಗೆ ಮಾತನಾಡುತ್ತಿದೆ.

ಸಂವಿಧಾನದ ಪ್ರತಿಯನ್ನು ಕೈಯಲ್ಲಿ ಹಿಡಿದುಕೊಂಡು ಓಡಾಡುವುದರಿಂದ ಏನನ್ನೂ ಸಾಧಿಸಲು ಸಾಧ್ಯವಿಲ್ಲ. ಸಂವಿಧಾನವನ್ನು ಆತ್ಮದಲ್ಲಿ ಜೀವಂತವಾಗಿಡಬೇಕು ಎಂದು ಸಿಂಧಿಯಾ ಸುದ್ದಿಗಾರರಿಗೆ ತಿಳಿಸಿದರು.

ಪ್ರತಿ ವರ್ಷ ಜೂನ್ 25 ರಂದು ಕಾಂಗ್ರೆಸ್ ಮತ್ತು ಅದರ ನಾಯಕರು ಪಶ್ಚಾತ್ತಾಪ ಪಡಬೇಕು ಎಂದು ಬಿಜೆಪಿ ಸಂಸದರು ಹೇಳಿದರು. ಕಾಂಗ್ರೆಸ್ ತುರ್ತು ಪರಿಸ್ಥಿತಿ ಹೇರುವ ಮೂಲಕ ಸಂವಿಧಾನವನ್ನು ಹರಿದು ಹಾಕಿತು. ಆದರೆ ಬಿಜೆಪಿ ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ರಕ್ಷಿಸಲು ಬದ್ಧತೆಯಿಂದ ಕೆಲಸ ಮಾಡುತ್ತಿದೆ ಎಂದು ಅವರು ಭೋಪಾಲ್‌ನಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಯುವ ಮಾರ್ಗ

ಗುರುವಾರ : 26-06-2025

## ಜೂನ್ 27ರಂದು ವಿವಿಧ ಕ್ರೀಡೆಗಳಿಗೆ ವಿಶೇಷ ಆಯ್ಕೆ ಶಿಬಿರ

**ರಾಯಚೂರು,ಜೂ.25–** ಇಲ್ಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2025-26ನೇ ಸಾಲಿನಲ್ಲಿ ಕ್ರೀಡಾ ವಸತಿ ಶಾಲೆ ಹಾಗೂ ನಿಲಯಗಳಿಗೆ 8ನೇ ತರಗತಿ ಮತ್ತು ಪ್ರಥಮ ಪಿ.ಯು.ಸಿ ಮಟ್ಟದ ಅರ್ಹ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಪ್ರವೇಶಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಈಗಾಗಲೇ ಜಿಲ್ಲಾ ಹಾಗೂ ವಿಭಾಗ ಮಟ್ಟದಲ್ಲಿ ಆಯ್ಕೆ ಪ್ರಕ್ರಿಯೆ ನಡೆಸಲಾಗಿರುತ್ತದೆ. ಈ ಆಯ್ಕೆ ಶಿಬಿರಗಳಲ್ಲಿ ವಿವಿಧ ಕಾರಣಗಳಿಂದ ಭಾಗವಹಿಸಲು ಸಾಧ್ಯವಾಗದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶವನ್ನು ನೀಡುವ ದೃಷ್ಟಿಯಿಂದ ಜೂನ್ 27 ವಿವಿಧ ಕ್ರೀಡೆಗಳಿಗೆ ವಿಶೇಷ ಆಯ್ಕೆ ಶಿಬಿರಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ.

ಕಿರಿಯರ ವಿಭಾಗದ ಕ್ರೀಡಾ ವಸತಿ ಶಾಲೆಗಳ ಆಯ್ಕೆಯನ್ನು ಪ್ರಸ್ತುತ 7ನೇ ತರಗತಿ ಅಭ್ಯಾಸ ಮಾಡುತ್ತಿರುವ ಬಾಲಕ ಅಥವಾ ಬಾಲಕಿಯರಿಗಾಗಿ ದಿನಾಂಕ: 01-06-2025 ರಂದು 14 ವರ್ಷದೊಳಗಿರಬೇಕು ಮತ್ತು 8 ನೇ ತರಗತಿಗೆ ಪ್ರವೇಶ ಪಡೆಯಲು ಅರ್ಹರಾಗಿರಬೇಕು.

ಹಿರಿಯರ ವಿಭಾಗದ ಕ್ರೀಡಾ ವಸತಿ ಶಾಲೆಗಳ ಆಯ್ಕೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳು ದಿನಾಂಕ : 01-06-2025 ರಂದು 18 ವರ್ಷದೊಳಗಿದ್ದು, ಪ್ರಥಮ ಪಿ.ಯು.ಸಿ ಪ್ರವೇಶ ಪಡೆಯಲು ಅರ್ಹರಿರಬೇಕು. ಆಯ್ಕೆಯನ್ನು ಪ್ರಸ್ತುತ 10ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಬಾಲಕ ಅಥವಾ ಬಾಲಕಿಯರಿಗಾಗಿ ಆಯ್ಕೆ ನಡೆಸಲಾಗುತ್ತಿದೆ. ಆಸಕ್ತರು ವ್ಯಾಸಾಂಗ ಮಾಡುತ್ತಿರುವ ಶಾಲಾ ಮುಖ್ಯಸ್ಥರಿಂದ ಜನ್ಮ ದಿನಾಂಕ ಪ್ರಮಾಣ ಪತ್ರ ಹಾಗೂ ವ್ಯಾಸಂಗ ಮಾಡುತ್ತಿರುವ ತರಗತಿಯ ವಿವರಗಳನ್ನೊಳಗೊಂಡ ದೃಢೀಕರಣ ಪತ್ರವನ್ನು ಆಯ್ಕೆ ದಿನದಂದು ಕಡ್ಡಾಯ ತರಬೇಕು. ಆಸಕ್ತ ಕ್ರೀಡಾಪಟುಗಳು ಈ ವಿಶೇಷ ಆಯ್ಕೆ ಶಿಬಿರದಲ್ಲಿ ಭಾಗವಹಿಸಬಹುದಾಗಿದೆ. ರಾಜ್ಯದ ಯಾವುದೇ ಭಾಗದ ಕ್ರೀಡಾಪಟಗಳು ಭಾಗವಹಿಸಲು ಮುಕ್ತ ಅವಕಾಶವಿರುತ್ತದೆ. ಆಯ್ಕೆಯಲ್ಲಿ ಪಾಲ್ಗೊಳ್ಳುವ ಕ್ರೀಡಾಪಟುಗಳಿಗೆ ಯಾವುದೇ ವಿಧವಾದ ಭತ್ಯೆ ನೀಡಲಾಗುವುದಿಲ್ಲ.

ಹೆಚ್ಚಿನ ವಿವರಗಳಿಗೆ ಸಹಾಯಕ ನಿರ್ದೇಶಕರ ಕಚೇರಿ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಇಲ್ಲಿ ಅಥವಾ ಖೇಲೋ ಇಂಡಿಯಾ ತರಬೇತುದಾರರು ಚಂದ್ರಶೇಖರ್ ಮೊಬೈಲ್ ಸಂಖ್ಯೆ: 9886551214ಗೆ ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಧಾನ ಮಂತ್ರಿ ಆವಾಸ್ ಯೋಜನೆಗೆ ಅರ್ಜಿ ಆಹ್ವಾನ

**ರಾಯಚೂರು,ಜೂ.25–**ಜಿಲ್ಲೆಯ ಮಸ್ಕಿ ಪುರಸಭೆಯಿಂದ 2025-26ನೇ ಸಾಲಿನ ನಗರ ಪ್ರದೇಶಗಳಲ್ಲಿ ಪ್ರಧಾನಮಂತ್ರಿ ಅವಾಸ್ (ನಗರ) 2.0 ಯೋಜನೆಡಿ ಅರ್ಹ ಫಲಾನುಭವಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ.

ಒಂಟಿ ಮಹಿಳೆಯರು, ಅಂಗವಿಕಲರು, ಹಿರಿಯ ನಾಗರಿಕರು, ತೃತೀಯ ಲಿಂಗಿಗಳು ಎಸ್‌ಸಿ,ಎಸ್.ಟಿ / ಹಿಂದುಳಿದ/ ಅಲ್ಪಸಂಖ್ಯಾತ ವರ್ಗದವರು, ಸ್ವಚ್ಛತಾ ಕಾರ್ಮಿಕರು, ಪಿ.ಎಮ್ ಸ್ವಾನಿಧಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪಾರಿಗಳು ಮತ್ತು ಪ್ರಧಾನ್ ಮಂತ್ರಿ ವಿಶ್ವ ಕರ್ಮ ಯೋಜನೆಯಡಿ ಗುರುತಿಸಿದ ಕುಶಲ ಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕರು ವಲಸೆ ಬಂದ ಕುಟುಂಬದವರು ಆಧಾರ್ ಕಾರ್ಡ್, ವಸತಿ ರಹಿತರಾದಲ್ಲಿ ನಿವೇಶನಕ್ಕೆ ಸಂಬಂಧಿಸಿದ ದಾಖಲೆಗಳು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಡಿತರ ಚೀಟಿ, ಬ್ಯಾಂಕ್ ಪಾಸ್ ಬುಕ್ ಪ್ರತಿ, ನಿಗದಿತ ನಮೂನೆ ಅರ್ಜಿ, ಮೊಬೈಲ್ ಸಂಖ್ಯೆ ಹಾಗೂ ಪ್ಯಾನ್ ಕಾರ್ಡನೊಂದಿಗೆ ಅರ್ಜಿಯನ್ನು ಇಲಾಖೆ ವಿಳಾಸ: URL https://pmay-urban.gov.in ನಲ್ಲಿ ಜುಲೈ 15 ರೊಳಗಾಗಿ ಸಲ್ಲಿಸಿ, ಕಾರ್ಯಾಲಯಕ್ಕೆ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದಂತಹ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಶಾಖೆಯ ಅಧಿಕಾರಿಗಳನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕಿಸುವಂತೆ ಮಸ್ಕಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 7, 8, 9ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು ಜೂನ್ 25 (ಕರ್ನಾಟಕ ವಾರ್ತೆ):** ನಗರದ ಯರಮರಸ್‌ನಲ್ಲಿರುವ ಆದರ್ಶ ವಿದ್ಯಾಲಯ ಆಂಗ್ಲ ಮಾಧ್ಯಮ ಮಾದರಿ ಶಾಲೆಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದ್ದು, ಅರ್ಹ ವಿದ್ಯಾರ್ಥಿಗಳು ಜುಲೈ 1 ರೊಳಗಾಗಿ ಅರ್ಜಿ ಸಲ್ಲಿಸಬಹುದು ಎಂದು ಆದರ್ಶ ವಿದ್ಯಾಲಯದ ಮುಖ್ಯಾಧ್ಯಾಪಕರಾದ ಮಂಜುನಾಥ ಅವರು ತಿಳಿಸಿದ್ದಾರೆ.

2025-26ನೇ ಸಾಲಿನಲ್ಲಿ ಶಾಲೆಯಲ್ಲಿ ಖಾಲಿ ಇರುವ 7, 8 ಮತ್ತು 9ನೇ ತರಗತಿ ವಿದ್ಯಾರ್ಥಿಗಳ ಉಳಿಕೆ ಸೀಟುಗಳಿಗೆ ಪ್ರವೇಶ ಪರೀಕ್ಷೆ ನಡೆಸಲು ಅರ್ಜಿ ಆಹ್ವಾನಿಸಿದ್ದು, ಜುಲೈ 6 ರಂದು ಪ್ರವೇಶ ಪರೀಕ್ಷೆ ನಡೆಸಲಾಗುತ್ತದೆ. ಅರ್ಜಿಗಳು ಆದರ್ಶ ವಿದ್ಯಾಲಯದಲ್ಲಿ ಲಭ್ಯವಿದ್ದು, ಖುದ್ದಾಗಿ ಪಡೆದು ನಿಗದಿತ ದಿನಾಂಕದೊಳಗೆ ಅರ್ಜಿ ಸಲ್ಲಿಸಬೇಕು. ಮೀಸಲಾತಿ ಅನ್ವಯ ಸೀಟುಗಳನ್ನು ವಿದ್ಯಾರ್ಥಿಗಳಿಗೆ ಹಂಚಿಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ 9743304420, 7406000035 ಗೆ ಸಂಪರ್ಕಿಸಬಹುದಾಗಿದೆ ಮುಖ್ಯೋಪಾಧ್ಯಾಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಪಿಎಚ್‌ಎಫ್ ವತಿಯಿಂದ ಮಹಿಳಾ ಆರೋಗ್ಯ ತಪಾಸಣೆ ಶಿಬಿರ: ಡಾ.ಎ.ಉಮಾನಿ ಚಾಲನೆ

**ಯುವ ಮಾರ್ಗ ಸುದ್ದಿ**



**ರಾಯಚೂರು,ಜೂ.25–** ತಾಲೂಕಿನ ಗಿಲ್ಲೆಸೂಗೂರಿನಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪಿಪಿಎಚ್‌ಎಫ್ ಜಿಇಹೆಲ್ತ್ ಕೇರ್ ವತಿಯಿಂದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನ ಡಾ.ಎ.ಉಮಾನಿ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು ಪಿಪಲ್‌ಟೂಪಿಪಲ್‌ಜಿಈ ಹೆಲ್ತ್ ಕೇರ್ ವತಿಯಿಂದ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಗಿಲ್ಲೆಸೂಗೂರು ಸಂಯುಕ್ತಾಶ್ರಯದಲ್ಲಿ ಮಹಿಳಾ ಆರೋಗ್ಯ ತಪಾಸಣೆ ಶಿಬಿರದಲ್ಲಿ ಮಹಿಳೆಯರ ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಕಣ್ಣು ,ಹಲ್ಲು ,ಬಿಪಿ,ಶುಗರ್, ಮತ್ತು ಹೆಚ್‌ಬಿ ಪರೀಕ್ಷೆ ಹಾಗೂ ಪೌಷ್ಟಿಕ ಆಹಾರದ ಅರಿವು ಕಾರ್ಯಕ್ರಮವನ್ನ ಈ ಸಂಸ್ಥೆಯು ಉಚಿತವಾಗಿ ಹಮ್ಮಿಕೊಂಡಿದ್ದು ತಜ್ಞಾರಿಂದ ಚಿಕಿತ್ಸೆ ಪಡೆದು ಇದರ ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದರು.

ನಂತರ ಮಾತನಾಡಿದ ಪಿಪಿಎಚ್‌ಎಫ್ ಜಿಇಹೆಲ್ತ್ ಕೇರ್ ಸಂಸ್ಥೆಯ ವ್ಯವಸ್ಥಾಪಕರು ಮಲ್ಲೈಕಾ ಅಮೀನ್ ಅವರು ನಮ್ಮ ಸಂಸ್ಥೆಯ ಉದ್ದೇಶವು ಗ್ರಾಮೀಣ ಮಹಿಳೆಯರಿಗೆ ಶೇ.70ರಷ್ಟು ಆದ್ಯತೆ ನೀಡುವುದರ ಮೂಲಕ ಸೇವೆಯನ್ನ ನೀಡುತ್ತಿದೆ. ಮಹಿಳೆಯರಿಗೆ ಹಾಗೂ ಹಿರಿಯ ನಾಗರೀಕರಿಗೆ ಬಿಪಿ ಶುಗರ್ ಹಲ್ಲು ನೋವು, ಕಣ್ಣು ಪರೀಕ್ಷೆ, ತಜ್ಞ ವೈದ್ಯರಿಂದ ಚಿಕಿತ್ಸೆ ಕೊಡಿಸುವುದರ ಜೊತೆಗೆ ಉತ್ತಮ ಆರೋಗ್ಯದೃಷ್ಟಿಯಿಂದ ತಜ್ಞರು ನೇತ್ರ, ದಂತ ತಪಾಸಣೆ ಮತ್ತು ಸ್ತ್ರೀ ರೋಗ ತಜ್ಞರಿಂದ ಮಹಿಳೆಯರ ಆರೋಗ್ಯ ತಪಾಸಣೆ ಜೊತೆಗೆ ಮಾನಸಿಕ ಆರೋಗ್ಯ ಕುರಿತು ಆಪ್ತ ಸಮಾಲೋಚಕರಿಂದ ಮಾಹಿತಿ ಮತ್ತು ಶಿಕ್ಷಣವನ್ನ ನೀಡಲಾಗುತ್ತಿದೆ ಎಂದು ಹೇಳಿದರು.

ತಪಾಸಣೆಗೆ ಬಂದಿದ್ದ ಜನರಿಗೆ ಮಾನಸಿಕ ಆರೋಗ್ಯ ಕುರಿತು ಆಪ್ತ ಸಮಾಲೋಚಕಿ ಸುವರ್ಣ ಅವರು ಮಾಹಿತಿ ನೀಡಿದರು. ಪಿಪಿಹೆಚ್‌ಎಫ್ ಸಿಬ್ಬಂಧಿಯು ಉಚಿತವಾಗಿ ಆಯುಷ್ಮಾನ್ ಭಾರತ ಆರೋಗ್ಯ ವಿಮೆ ಯೋಜನೆಗೆ ನೋಂದಣಿ ಹಾಗೂ ಮಹಿಳೆಯರಿಗೆ ಮೆಹಂದಿ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಕಣ್ಣಿನ ತಜ್ಞರು ಗುರುನಾಥ ರೇಣುಕಾ ಹಾಗೂ ಸಿಬ್ಬಂಧಿ ವರ್ಗ ಪ್ರಾಣ ಸಂಸ್ಥೆಯ ಓಂಕಾರ, ನಾಗರತ್ನ,ಮುತ್ತಣ್ಣ ಸಲ್ಮಾ, ಶರಣು ಗೌಡ, ಪೂಜಾಶ್ರೀ ಸಂಧ್ಯಾ, ನರಸಮ್ಮ ಸ್ವಯಂಸೇವಕರು ಗ್ರಾಮಸ್ಥರು ಇದ್ದರು.

## ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ವಿರುದ್ಧ ಕ್ರಮಕ್ಕೆ ದಸಂಸ ಒತ್ತಾಯ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.25–** ಸತತ ನಾಲ್ಕು ದಿನಗಳ ಕಾಲ ಸಕಾರಣವಿಲ್ಲದೇ ಕೆಲಸಕ್ಕೆ ಗೈರು ಹಾಜರಾಗಿರುವ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಮೇಲೆ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಕಾರ್ಯಕರ್ತರು ಸಹಾಯಕ ಆಯುಕ್ತರ ಕಚೇರಿ ಅಧಿಕಾರಿ ಮೂಲಕ ಹಿಂದುಳಿದ ವರ್ಗಗಳ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಬಿಸಿಎಂ ಕಲ್ಯಾಣಾಧಿಕಾರಿ ರಮೇಶ್ ಜಿ. ರಾಥೋಡ್ ಅವರು ಜೂನ್ 21 ರಿಂದ 24ರ ವರೆಗೆ ಬಯೋಮೆಟ್ರಿಕ್ ಹಾಜರಾತಿ ಇಲ್ಲದೇ, ಚಲನವಲನ ಪುಸ್ತಕದಲ್ಲೂ ನಮೂದಿಸದೇ, ಯಾವುದೇ ಪರವಾನಿಗೆ ಪತ್ರ ಇಲ್ಲದೇ ಸತತ ನಾಲ್ಕು ದಿನಗಳ ಕಾಲ ಕರ್ತವ್ಯಕ್ಕೆ ಗೈರಾಗಿದ್ದಾರೆ. ಕೂಡಲೇ ತನಿಖೆ ನಡೆಸಿ ಕರ್ತವ್ಯ ನಿರ್ಲಕ್ಷ್ಯ ತೋರಿದ ಅಧಿಕಾರಿ ವಿರುದ್ಧ ಸೂಕ್ತ ಕ್ರಮಕ್ಕೆ ಮುಂದಾಗಬೇಕು ಎಂದು ಆಗ್ರಹಿಸಿದರು.



ಅಲ್ಲದೇ, ಮಸ್ಕಿ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದ ಅಡುಗೆಯುವರಾದ ಸುಧಾ ಇವರನ್ನು ಪ್ರಭಾರಿ ಮೇಲ್ವಿಚಾರಕಿಯಾಗಿ ನೇಮಕ ಮಾಡಿರುವುದನ್ನು ರದ್ದು ಪಡಿಸಿ, ಲಿಂಗಸುಗೂರಿನ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದ ಮೇಲ್ವಿಚಾರಕಿ ದ್ರಾಕ್ಷಾಯಿಣಿ ಅವರನ್ನು ಹೆಚ್ಚುವರಿ ಪ್ರಭಾರಿ ಮೇಲ್ವಿಚಾರಕಿಯಾಗಿ ನೇಮಿಸಿ ಆದೇಶ ನೀಡಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿಸಂಘಟನೆ ಅಧ್ಯಕ್ಷ ಚನ್ನಬಸವ, ಬಸವರಾಜ ಸೇರಿ ಇತರರು ಇದ್ದರು.

## ಬಹಿರಂಗ ಹೇಳಿಕೆ ಬೇಡ,ಶಾಸಕರಿಗೆ ಹೈಕಮಾಂಡ್ ತಾಕೀತು



ಮುಖ್ಯಮಂತ್ರಿ ಸಿದ್ದರಾಮಯ್ಯನವರು ದೆಹಲಿಯಲ್ಲಿಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದರು. ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಶಾಸಕ ಅಶೋಕ್ ಪಟ್ಟಣ್ ಉಪಸ್ಥಿತರಿದ್ದರು.

**ಬೆಂಗಳೂರು, ಜೂ. 25–** ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಸ್ವಪಕ್ಷದ ಶಾಸಕರುಗಳೇ ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿರುವುದು ಸರ್ಕಾರದ ವರ್ಚಸ್ಸಿಗೆ ಧಕ್ಕೆ ತರುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಹೈಕಮಾಂಡ್, ಪ್ರತಿಯೊಬ್ಬ ಶಾಸಕರಿಗೂ ಬಹಿರಂಗವಾಗಿ ಮಾತನಾಡದಂತೆ ಸಂದೇಶ ರವಾನೆ ಮಾಡಿದೆ.

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ನಿನ್ನೆ ಮತ್ತು ಇಂದು ದೆಹಲಿಯಲ್ಲಿ ವರಿಷ್ಠರನ್ನು ಭೇಟಿ ಮಾಡಿ ರಾಜ್ಯ ರಾಜಕೀಯ ವಿದ್ಯಮಾನಗಳನ್ನು ಗಮನಕ್ಕೆ ತಂದ ಬೆನ್ನಲ್ಲೇ, ಹೈಕಮಾಂಡ್ ಯಾವುದೇ ಶಾಸಕರು ಬಹಿರಂಗವಾಗಿ ಮಾತನಾಡಬಾರದು ಏನೇ ಅಸನಾಧಾನ, ಭಿನ್ನಾಬಿಪ್ರಾಯಗಳಿದ್ದರೆ ಪಕ್ಷದ ಚೌಕಟ್ಟಿನಲ್ಲೇ ಬಗೆಹರಿಸಿಕೊಳ್ಳಿ ಎಂದು ಖಡಕ್ ಎಚ್ಚರಿಕೆ ನೀಡಿದೆ. ಬಹಿರಂಗವಾಗಿ ಹೇಳಿಕೆ ನೀಡುವುದು ಸರಿಯಲ್ಲ. ಇದು ವಿಪಕ್ಷಗಳಿಗೆ ಅಸ್ತ್ರ ಒದಗಿಸಿದಂತಾಗುತ್ತದೆ. ಹಾಗಾಗಿ ಏನೇ ಸಮಸ್ಯೆಗಳಿದ್ದರೂ ಅದನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಬಗೆಹರಿಸಿಕೊಳ್ಳಿ ಎಂದು ಹೈಕಮಾಂಡ್ ಸರ್ಕಾ ರದ ವಿರುದ್ಧ ಬಹಿರಂಗವಾಗಿ ಮಾತನಾಡಿದ ಶಾಸಕರುಗಳಿ ಗೂ ಕಟ್ಟುನಿಟ್ಟಿನ ಸೂಚನೆ ನೀಡಿದೆ ಎಂದು ಹೇಳಲಾಗಿದೆ.

**ಸಿಎಂ ವರಿಷ್ಠರ ಭೇಟಿ:** ದೆಹಲಿಯಲ್ಲಿರುವ ಮುಖ್ಯಮಂ ತ್ರಿ ಸಿದ್ಧರಾಮಯ್ಯ ಅವರು ಇಂ ದು ಬೆಳಗ್ಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣು ಗೋಪಾಲ್ ರವರನ್ನು ಭೇಟಿ ಮಾಡಿ ಸುಮಾರು ಹೊತ್ತು ಚ ರ್ಚೆ ನಡೆಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಶಾಸಕರುಗಳ ಅಸಮಾಧಾನ ಬಹಿರಂಗ ಹೇಳಿಕೆ ಎಲ್ಲಗಳ ಬಗ್ಗೆಯೂ ಇಬ್ಬರು ನಾಯಕರು ಚರ್ಚೆ ನಡೆಸಿದ್ದು, ಅಸಮಧಾನಿತ ಶಾಸ'ಕರನ್ನು ಕರೆದು ಮಾತನಾಡುತ್ತೇನೆ. ನೀವೂ ಸಹ ಶಾಸಕರಿಗೆ ಬಹಿರಂಗವಾಗಿ ಮಾತನಾಡದಂತೆ ಸೂಚನೆ ನೀಡಿ ಎಂದು ಮುಖ್ಯಮಂತ್ರಿಗಳು ದೆಹಲಿ ನಾಯಕರಿಗೆ ಹೇಳಿದ್ದಾರೆ ಎನ್ನಲಾಗಿದೆ. ಎರಡು ದಿನಗಳ ಹಿಂದೆ ದೆಹಲಿಗೆ ತೆರಳಿದ್ದ ಮುಖ್ಯಮಂತ್ರಿ ಸಿದ್ಧರಾಮಯ್ಯ ನಿನ್ನೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ, ರವರನ್ನು ಭೇಟಿ ಮಾ ಡಿ ಎಲ್ಲ ವಿಚಾರಗಳ ಬಗ್ಗೆ ಚ'ರ್ಚೆ ನಡೆಸಿದರು. ಈ ಸಂದರ್ಭದಲ್ಲಿ ಸಚಿವರುಗಳಾದ ಡಾ. ಹೆಚ್.ಸಿ. ಮಹದೇವಪ್ಪ, ಸತೀಶ್ ಜಾರಕಿಹೊಳಿ, ಕೆ.ಜೆ. ಜಾರ್ಜ್ ಮತ್ತಿತರರು ಮುಖ್ಯಮಂತ್ರಿಗಳ ಜತೆಗಿದ್ದರು. ಇಂದೂ ಸಹ ಕೆ.ಸಿ ವೇಣುಗೋಪಾಲ್ ರ'ವರ ಭೇಟಿ ಮಾಡಿದ ಸಂದರ್ಭದಲ್ಲಿ ಸಚಿವ ಡಾ. ಹೆಚ್. ಸಿ. ಮಹದೇವಪ್ಪ, ಸರ್ಕಾರದ ಮುಖ್ಯ ಸಚೇತಕ ಪಿ.ಎಂ. ಅಶೋಕ್, ಮುಖ್ಯಮಂತ್ರಿಗಳ ಜತೆ ಇದ್ದರು.

## ಕೃಷಿ ಇಲಾಖೆಯಿಂದ ವಿವಿಧ ಬೆಳೆ ವಿಮೆಗೆ ಅರ್ಜಿ ಆಹ್ವಾನ

**ರಾಯಚೂರು,ಜೂ.25–** ಇಲ್ಲಿನ ಕೃಷಿ ಇಲಾಖೆಯಿಂದ 2025-26ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಅರ್ಹ ರೈತರಿಂದ ಬೆಳೆ ವಿಮೆಗೆ ನೋಂದಣೆಗೆ ಅರ್ಜಿ ಆಹ್ವಾನಿಸಲಾಗಿದೆ.

ಹಲವಾರು ಅಪಾಯಗಳಿಂದ ಬೆಳೆ ನಷ್ಟವಾದಾಗ ರೈತರನ್ನು ರಕ್ಷಿಸುವ ಮಧ್ಯಮ ಬೆಳೆ ವಿಮೆಯಾಗಿರುತ್ತದೆ. ಪ್ರಸ್ತುತ ಸಾಲು ಮತ್ತು ಹಂಗಾಮಿನಲ್ಲಿ ಸ್ಥಳ ನಿರ್ದಿಷ್ಟ ಪ್ರಕೃತಿ ವಿಕೋಪಗಳಾದ ಆಲಿಕಲ್ಲು ಮಳೆ, ಭೂ ಕುಸಿತ ಮತ್ತು ಬೆಳೆ ಮುಳುಗಡೆ ಸಂಧರ್ಭದಲ್ಲಿ ಬೆಳೆ ನಷ್ಟ ಉಂಟಾದಲ್ಲಿ ವೈಯುಕ್ತಿಕ ನಷ್ಟದ ನಿರ್ವಹಣೆಗಾಗಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆಯನ್ನು ಅಧಿಸೂಚಿಸಲಾಗಿದೆ.

**ಯೋಜನೆಯ ವ್ಯಾಪ್ತಿ:** 2025-26ನೇ ಸಾಲಿನಿಂದ ಪರಿಷ್ಕರಿಸಿದ ಪಿಎಮ್‌ಎಫ್‌ಬಿವೈ (ಠಿಟಜಿಭಥಿ) ಮಾರ್ಗಸೂಚಿಯನ್ವಯ ಬೆಳೆ ಸಾಲ ಮಂಜೂರಾದ ಎಲ್ಲಾ ರೈತರನ್ನು ಕಡ್ಡಾಯವಾಗಿ ಈ ಯೋಜನೆಯಲ್ಲಿ ಒಳಪಡಿಸಲಾಗುವುದು. ಅದರಂತೆ, ಬೆಳೆ ಸಾಲ ಪಡೆದ ರೈತರು ಈ ಯೋಜನೆಯಲ್ಲಿ ಭಾಗವಹಿಸಲು ಇಚ್ಛೆ ಪಡದೇ ಇದ್ದಲ್ಲಿ ಈ ಕುರಿತು ಬ್ಯಾಂಕಿನ ವ್ಯವಸ್ಥಾಪಕರಿಗೆ ಬೆಳೆ ನೋಂದಣಿ ಅಂತಿಮ ದಿನಾಂಕಕ್ಕಿಂತ 7 ದಿನಗಳು ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರ ನೀಡಿದ್ದಲ್ಲಿ ಅಂತಹ ರೈತರನ್ನು ಬೆಳೆ ವಿಮೆ ಯೋಜನೆಯಿಂದ ಕೈಬಿಡಲಾಗುವುದು. ಈ ಕುರಿತು ಸಂಬಂಧಿಸಿದ ಬ್ಯಾಂಕ್‌ಗಳಿಗೆ ಭೇಟಿ ನೀಡಬಹುದಾಗಿದೆ.

ಬೆಳೆ ಸಾಲ ಪಡೆಯದ ರೈತರು ಅಂದಾಜು ಬೆಳೆ ಬಿತ್ತನೆ ಆಧಾರದ ಮೇಲೆ ಬಿತ್ತನೆ ಪೂರ್ವದಲ್ಲಿ ಈ ಯೋಜನೆಯಲ್ಲಿ ಪಾಲ್ಗೊಳ್ಳಬಹುದು. ಈ ಯೋಜನೆಯಡಿಯಲ್ಲಿ ಬೆಳೆ ಸಾಲ ಪಡೆಯದ ರೈತರು ಅಂದಾಜು ಅಥವಾ ಉಪೇಕ್ಷಿತ ಬೆಳೆ ಬಿತ್ತನೆ ಆಧಾರದ ಮೇಲೆ ಬಿತ್ತನೆ ಪೂರ್ವದಲ್ಲಿ ಪಾಲ್ಗೊಳ್ಳಬಹುದು. ಬೆಳೆ ವಿಮೆಗೆ ನೋಂದಾಯಿಸಿದ ನಂತರ ಬೇರೆ ಬೆಳೆ ಬಿತ್ತನೆ ಮಾಡಿದಲ್ಲಿ ಯೋಜನೆಯಲ್ಲಿ ಭಾಗವಹಿಸಲು ಕೇಂದ್ರ ಸರ್ಕಾರದ ಮಾರ್ಗಸೂಚಿಯಲ್ಲಿ ನಿಗಧಿಪಡಿಸಿದ ಅವಧಿಯೊಳಗಾಗಿ ನೋಂದಾಯಿಸಿದ ಆರ್ಥಿಕ ಸಂಸ್ಥೆಗಳಲ್ಲಿ ಬಿತ್ತನೆ ದೃಢೀಕರಣ ಪತ್ರ ನೀಡಿ ವಿಮೆ ಮಾಡಿಸಿದ ಬೆಳೆಯನ್ನು ಬದಲಾಯಿಸತಕ್ಕದ್ದು. ಅಂತಹ ಸಂದರ್ಭದಲ್ಲಿ ಹೆಚ್ಚುವರಿ ವಿಮಾ ಕಂತಿನ ವ್ಯತ್ಯಾಸದ ಮೊತ್ತವನ್ನು ರೈತರು ಭರಿಸತಕ್ಕದ್ದು ಅಥವಾ ಹೆಚ್ಚುವರಿ ವಿಮಾ ಕಂತನ್ನು ಪಾವತಿಸಿದ್ದಲ್ಲಿ ರೈತರಿಗೆ ಮರುಪಾವತಿಸಲಾಗುತ್ತದೆ.

ರಾಯಚೂರು ಜಿಲ್ಲೆಯಲ್ಲಿ ಭತ್ತ (ಮಳೆಯಾಶ್ರೀತ) 312.18ರೂ., ಹತ್ತಿ (ನೀರಾವರಿ) 1492.33 ರೂ., ಹತ್ತಿ (ಮಳೆಯಾಶ್ರೀತ) 1006.69ರೂ., ತೊಗರಿ (ನೀರಾವರಿ) 406.72 ರೂ., ತೊಗರಿ (ಮಳೆಯಾಶ್ರೀತ) 388.51 ರೂ., ಸೂರ್ಯಕಾಂತಿ (ಮಳೆಯಾಶ್ರೀತ) 329.83ರೂ., ನೆಲಗಡಲೆ (ನೀರಾವರಿ) 505.57ರೂ., ನೆಲಗಡಲೆ (ಮಳೆಯಾಶ್ರೀತ) 441.12ರೂ., ಸಜ್ಜೆ (ನೀರಾವರಿ) 317.69 ರೂ., ಸಜ್ಜೆ (ಮಳೆಯಾಶ್ರೀತ) 220.54ರೂ., ಎಳ್ಳು (ಮಳೆಯಾಶ್ರೀತ) 232.7 ರೂ., ಹೆಸರು (ಮಳೆಯಾಶ್ರೀತ) 269.13 ರೂ.ಗಳನ್ನು ಜುಲೈ 31ರೊಳಗಾಗಿ ರೈತರು ವಿಮಾ ಮಾಡಿಸಬಹುದಾಗಿದೆ.

ಭತ್ತ (ನೀರಾವರಿ) 754.77 ರೂ., ಮುಸುಕಿನ ಜೋಳ (ನೀರಾವರಿ) 522.06 ರೂ., ಈರುಳ್ಳಿ (ನೀರಾವರಿ) 218.27 ರೂ., ಸೂರ್ಯಕಾಂತಿ (ನೀರಾವರಿ) 394.58 ರೂ.ಗಳನ್ನು ಆಗಸ್ಟ್ 16ರೊಳಗಾಗಿ ರೈತರು ವಿಮಾ ಮಾಡಿಸಬಹುದಾಗಿದೆ.

2025-26 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರಾಯಚೂರು ಜಿಲ್ಲೆಗೆ ಯುನಿವರ್ಸಲ್ ಸೊಂಪೊ ಜನರಲ್ ಇನ್ಸೂರೆನ್ಸ್ ಕಂ. ಲಿ ಮಿಟೆಡ್ ಸಂಸ್ಥೆಯು ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, ರೈತರು ಪಹಣಿಯ ಪ್ರತಿ, ಬ್ಯಾಂಕ್ ಪಾಸಬುಕ್ ಪ್ರತಿ ಹಾಗೂ ಆಧಾರ ಪ್ರತಿ ಮತ್ತು ಕಡ್ಡಾಯವಾಗಿ ಎಫ್.ಐ.ಡಿ, ವಿವರಗಳೊಂದಿಗೆ ನಿಗಧಿತ ದಿನಾಂಕದೊಳಗಾಗಿ ಹತ್ತಿರದ ಗ್ರಾಮ ಓನ್, ಕರ್ನಾಟಕ ಓನ್, ಸಿಎಸ್ ಸಿ ಸೆಂಟರ್ಸ್ ಮತ್ತು ಬ್ಯಾಂಕ್ ಶಾಖೆಗಳಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಹಾಗೂ ಜಂಟಿ ಕೃಷಿ ನಿರ್ದೇಶಕರು ಕಚೇರಿಗೆ ಭೇಟಿ ನೀಡಬಹುದಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂನ್ 27 ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

**ರಾಯಚೂರು,ಜೂ.25–** ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಜುಲೈ 02 ರಂದು ಡಾ.ಫು.ಗು.ಹಳಕಟ್ಟಿ ಜಯಂತಿ ಹಾಗೂ ಜುಲೈ 10 ರಂದು ಹಡಪದ ಅಪ್ಪಣ್ಣ ಜಯಂತಿ ನಡೆಯಲಿವೆ.

ಈ ಜಯಂತಿ ಅಂಗವಾಗಿ ಜೂನ್ 27ರ ಸಂಜೆ 4ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಬಹುದಾಗಿದೆ. ಅಂದು ನಡೆಯುವ ಪೂರ್ವಭಾವಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜಿಲ್ಲೆಯ ವಿವಿಧ ಸಮಾಜದ ಮುಖಂಡರುಗಳು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**